ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೨

ಪಟ್ಟಿ – ೦೫

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಐದನೇ ಅಧಿವೇಶನ

ಮಂಗಳವಾರ, ದಿನಾಂಕ : ೧೧ನೇ ಮಾರ್ಚ್, ೨೦೨೫

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

೩. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

೫. ಪೌರಾಡಳಿತ ಮತ್ತು ಹಜ್ ಸಚಿವರು

೬. ಸಹಕಾರ ಸಚಿವರು

೭. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

---

## ಡಾಟಾ ಎಂಟ್ರಿ ಆಪರೇಟರ್/ ಕಂಪ್ಯೂಟರ್ ಆಪರೇಟರ್ ರವರುಗಳನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೧೩ (೫೫೫) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಾದ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಸುಮಾರು ೨೫ ವರ್ಷಗಳಿಂದ ಹೊರಗುತ್ತಿಗೆಯಡಿ ಡಾಟಾ ಎಂಟ್ರಿ ಆಪರೇಟರ್/ ಕಂಪ್ಯೂಟರ್ ಆಪರೇಟರ್ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವವರಿಗೆ ನೇರಪಾವತಿ/ ನೇರನೇಮಕಾತಿ ಪರಿಗಣಿಸುವ ಕುರಿತು ಸರ್ಕಾರವು ಯಾವ ರೀತಿಯ ಚಿಂತನೆ ನಡೆಸಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಡಾಟಾ ಎಂಟ್ರಿ ಆಪರೇಟರ್/ಕಂಪ್ಯೂಟರ್ ಆಪರೇಟರ್ ರವರುಗಳನ್ನು ಪೌರಕಾರ್ಮಿಕರ ಮಾದರಿಯಲ್ಲಿ ಹೊರಗುತ್ತಿಗೆ ರದ್ದುಪಡಿಸಿ, ನೇರ ಪಾವತಿಗೆ ಒಳಪಡಿಸುವಂತೆ ಸಂಬಂಧಪಟ್ಟ ಸಂಘಗಳಿಂದ ಹಲವಾರು ಬಾರಿ ಮನವಿ ಮಾಡಿದ್ದರೂ ಸಹ ಸರ್ಕಾರವು ಯಾವುದೇ ಕ್ರಮ ಕೈಗೊಳ್ಳದೇ ಇರಲು ಕಾರಣವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಾದ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಡಾಟಾ ಎಂಟ್ರಿ ಆಪರೇಟರ್/ಕಂಪ್ಯೂಟರ್ ಆಪರೇಟರ್‌ಗಳಿಗೆ ಸರ್ಕಾರದಿಂದ ಮಾಸಿಕ ನೀಡುತ್ತಿರುವ ವೇತನ ಮತ್ತು ಇತರೆ ಭತ್ಯೆಗಳ ಸಂಪೂರ್ಣವಾದ ಮಾಹಿತಿ ನೀಡುವುದು ?

## ಜವಳಿ ನೀತಿಯಲ್ಲಿ ಬೆಂಬಲ ಬೆಲೆ ಹಾಗೂ ಕೈಮಗ್ಗಗಳ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೧೪ (೫೯೬) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೊಸ ಜವಳಿ ನೀತಿಗೆ ಬೆಂಬಲ ಬೆಲೆ ನೀಡಲು ಸರ್ಕಾರದ ಕಾರ್ಯಸೂಚಿಯಲ್ಲಿದೆಯೇ ;

(ಆ) ರಾಜ್ಯದಲ್ಲಿ ಕೈಮಗ್ಗಗಳ ಪುನರ್ ಜೀವನಕ್ಕೆ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿ ಹೊಸ ಜವಳಿ ಪಾರ್ಕ್‌ಗಳ ನಿರ್ಮಾಣಕ್ಕೆ ಸರ್ಕಾರ ಯೋಚಿಸಿದೆಯೇ ;

(ಈ) ನೇಕಾರ ಅಭಿವೃದ್ಧಿ ನಿಗಮದಿಂದ ಇದುವರೆಗೂ ಎಷ್ಟು ಮಂದಿ ಫಲಾನುಭವಿಗಳಿದ್ದಾರೆ ? (ಫಲಾನುಭವಿಗಳ ವಿವರ ನೀಡುವುದು)

## ರಾಜ್ಯದಲ್ಲಿ ಸಹಕಾರ ಸಂಘಗಳ ಕಾಯ್ದೆ ಕಲಂ ೬೩ (೧೩) ಹಾಗೂ ೬೩ (೧೩-ಎ) ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೧೫ (೫೯೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಹಕಾರ ಸಂಘಗಳ ಕಾಯ್ದೆ ಕಲಂ ೬೩ (೧೩) ಹಾಗೂ ೬೩ (೧೩-ಎ) ರಂತೆ ಆದೇಶವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಸಹಕಾರ ಸಂಘಗಳ ಕಾಯ್ದೆ ಕಲಂ ೬೮(೩)ರಂತೆ ಹಣದುರಪಯೋಗ ತಡೆಯಲು ಅಳವಡಿಕೆಯಾಗಲು ಕ್ರಮವಾಗುತ್ತಿರುವ ಸಂದರ್ಭದಲ್ಲಿ ಕಲಂ ೬೩ (೧೩) ಹಾಗೂ ೬೩ (೧೩–ಎ) ರಂತೆ ಆದೇಶವಾದ ಪ್ರಕರಣಗಳು ಎಷ್ಟು; ಇದಕ್ಕೆ ಕಾರಣಗಳೇನು ;

(ಇ) ಕಲಂ ೬೩ (೧೩) ಹಾಗೂ ೬೩ (೧೩–ಎ) ರಂತೆ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ ವಿರುದ್ಧವಾಗಿ ಲೆಕ್ಕಪರಿಶೋಧಕರನ್ನು ನೇಮಕ ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು ; ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಈ) ಸರ್ಕಾರದ ಅನುಮತಿ ಇಲ್ಲದೇ ೬೩ (೧೩) ಹಾಗೂ ೬೩ (೧೩–ಎ)ರಂತೆ ನಿರ್ದೇಶಕರೆ ಆದೇಶ ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು ?

**ಸಿಂಧನೂರು ನೀರು ಸರಬರಾಜು ೨೪/೭ ಕಾಮಗಾರಿ ಕಳಪೆ ಬಗ್ಗೆ**

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿರಾದವರು) :–**

೪೧೬ (೯೯೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ೨೪/೭ ನೀರು ಸರಬರಾಜುವಿನಲ್ಲಿ ಕಳಪೆ ಕಾಮಗಾರಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ನಗರಕ್ಕೆ ಸರಬರಾಜು ಆಗುತ್ತಿರುವ ನೀರು ಸಮಾನಾಂತರವಾಗಿ ಎಲ್ಲರಿಗೂ ಹಂಚಿಕೆಯಾಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸಿಂಧನೂರಿಗೆ ನೀರು ಸರಬರಾಜು ಮಾಡಲು ಡಿ.ಪಿ.ಎ.ಆರ್ ನಲ್ಲಿ ಎಷ್ಟು ಎಕರೆ ಕಾಯ್ದಿರಿಸಲಾಗಿದೆ ?

# ಸಿಂಧನೂರು ನಗರಸಭೆಯ ತ್ಯಾಜ್ಯ ವಿಲೇವಾರಿ ಘಟಕದ ಅವ್ಯವಸ್ಥೆ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿರಾದವರು) :-**

೪೧೭ (೫೬೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿಂಧನೂರು ನಗರಸಭೆಯ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಬೆಂಕಿ ಬಿದ್ದು ಅಪಾರ ಪ್ರಮಾಣದ ತ್ಯಾಜ್ಯ ಸುಟ್ಟು ಹೋಗಿದ್ದು ಸುತ್ತಮುತ್ತಲಿನ ಮನೆಗಳಿಗೂ ಬೆಂಕಿ ತಗಲುವ ಸಾಧ್ಯತೆಗಳಿರುವುದರಿಂದ ಜನರು ಭಯಭೀತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಭಜಿಸದ ಹಿನ್ನಲೆಯಲ್ಲಿ ಬೆಂಕಿಯಿಂದಾಗಿ ಸುತ್ತಮುತ್ತಲಿನ ಪರಿಸರವು ಮಲೀನವಾಗುತ್ತಿರುವುದರಿಂದ ಶುದ್ಧ ಗಾಳಿಯ ಗುಣಮಟ್ಟವು ಕುಸಿತವಾಗಿ ಇದರಿಂದ ಇಲ್ಲಿನ ನಿವಾಸಿಗಳು ಹೊಗೆ ಮತ್ತು ವಾಸನೆಯಿಂದ ಜನರು ಮತ್ತು ಜಾನುವಾರುಗಳು ಅನಾರೋಗ್ಯದಿಂದ ಬಳಲುತ್ತಿದ್ದು ಇದಕ್ಕೆ ಕಾರಣರಾದವರ ವಿರುದ್ಧ ಯಾವ ಕ್ರಮಕೈಗೊಳ್ಳಲಾಗಿದೆ ;

(ಇ) ಸಿಂಧನೂರು ನಗರಸಭೆಯ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಐದು ವರ್ಷದಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಈ) ಈ ನಗರಸಭೆಯ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ಎಷ್ಟು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಇವರುಗಳಲ್ಲಿ

ಸರ್ಕಾರದಿಂದ ಮಂಜೂರಾದ ಹುದ್ದೆಗಳು ಹಾಗೂ ಖಾಲಿ ಇರುವ ಹಾಗೂ ಹೊರಗುತ್ತಿಗೆಯಿಂದ ನೇಮಕಗೊಂಡಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ? (ಮಾಹಿತಿಯನ್ನು ಒದಗಿಸುವುದು)

## ಕೈಗಾರಿಕೆಗಳ ವಿಸ್ತರಣೆ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿರಾದವರು) :-**

೪೧೮ (೫೬೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ (BSPL) ಬಾಲ್ಡೋಟಾ ಕಂಪನಿಯ ೫೪ ಸಾವಿರ ಕೋಟಿ ರೂ ವೆಚ್ಚದಲ್ಲಿ ೧೦.೦೫ ದಶಲಕ್ಷ ಟನ್ ಉಕ್ಕು ಉತ್ಪಾದನಾ ಕಾರ್ಖಾನೆಯನ್ನು ನಿರ್ಮಿಸುವ ಪ್ರಸ್ತಾವನೆಗೆ ಸರ್ಕಾರವು ಅನುಮತಿ ನೀಡಲಾಗಿದೆಯೇ ; (ವಿವರ ಒದಗಿಸುವುದು)

(ಆ) ಕೊಪ್ಪಳ ನಗರವು ಸೇರಿದಂತೆ ಸುತ್ತಲಿನ ಚಿಕ್ಕಬಗನಾಳ, ಕಾಸನಕಂಡಿ, ಹಾಲವರ್ತಿ, ಕುಣಿಕೇರಿ ಕರಿಹಲ್ಲೀ ಹಾಟಿ ಇನ್ನೂ ಹಲವು ಗ್ರಾಮಗಳ ಜನರು ಈಗಾಗಲೇ ಪ್ರಸ್ತುತ ಇರುವ ಕಾರ್ಖಾನೆಗಳು ವೈಜ್ಞಾನಿಕವಾಗಿ ಬೇರ್ಪಡಿಸದೆ ಹೊರ ಬಿಡುತ್ತಿರುವ ಕಾರ್ಖಾನೆಯ ಧೂಳು ಗ್ರಾಮಗಳಿಗೆ ಮತ್ತು ಮನೆಯೊಳಗೆ ನುಗುತ್ತಿರುವ ಪರಿಣಾಮ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಿ ಕೆಮ್ಮು, ದಮ್ಮು, ಟಿ.ಬಿ. ಚರ್ಮ ರೋಗ, ಕ್ಯಾನ್ಸರ್ ನಂತಹ ಖಾಯಿಲೆಗಳಿಂದ ಬಳಲುತ್ತಿರುವುದು ಹಾಗೂ ಕೆಟ್ಟ ಧೂಳಿನಿಂದಾಗಿ ಆವರಿಸಿದ ಹುಲ್ಲನ್ನೇ ಜಾನುವಾರುಗಳು ತಿಂದು ಅನಾರೋಗ್ಯಕ್ಕೆ ಈಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ ಈ ಕಾರ್ಖಾನೆಗಳು ಬಿಡುತ್ತಿರುವ ಹೊಗೆ, ಧೂಳು ಹಾಗೂ ಮಾಲಿನ್ಯ ನಿಯಂತ್ರಣಕ್ಕೆ ತೆಗೆದುಕೊಂಡ ಕ್ರಮ ಹಾಗೂ ಕಾರ್ಖಾನೆಗಳ ವಿರುದ್ಧ ಯಾವ ಕ್ರಮಕೈಗೊಳ್ಳಲಾಗುತ್ತಿದೆ ?

## ಸಿಂಧನೂರಿನ ಒಳಚರಂಡಿ ಅವ್ಯವಸ್ಥೆ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿರಾದವರು) :-**

೪೧೯ (೫೬೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿಂಧನೂರಿನಲ್ಲಿ ಒಳಚರಂಡಿ ಕಾಮಗಾರಿಯಲ್ಲಿ ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸಿಂಧನೂರು ಒಳಚರಂಡಿ ಅವ್ಯವಸ್ಥೆಯ ಸುಧಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಇಂಜಿನಿಯರಿಂಗ್ ಮತ್ತು ಸಣ್ಣ ಪ್ರಮಾಣದ ಉತ್ಪನ್ನಗಳ ತಯಾರಿಕೆ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿರಾದವರು) :-**

೪೨೦ (೫೬೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇಂಜಿನಿಯರಿಂಗ್ ಮತ್ತು ಸಣ್ಣ ಪ್ರಮಾಣದ ಉತ್ಪಾದನೆಯಂತಹ ಕೈಗಾರಿಕೆಗಳ ಸ್ಥಾಪನಗೆ ರಾಯಚೂರು ಜಿಲ್ಲೆಯ ಸಿಂಧನೂರಿನಲ್ಲಿ ಸೂಕ್ತವಾದ ಮೂಲಸೌಲಭ್ಯಗಳಿದ್ದು, ಇದುವರೆಗೂ ಯಾವುದೇ ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸದಿರಲು ಕಾರಣವೇನು ;

(ಆ) ಈ ನಿಟ್ಟಿನಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಇ) ಇದ್ದಲ್ಲಿ ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಹಕಾರ ಇಲಾಖೆಯಿಂದ ರೈತರಿಗೆ ನೀಡಿರುವ ಸಾಲದ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೪೨೧ (೫೫೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಕಾರ ಇಲಾಖೆಯಿಂದ ಕಳೆದ ೨ ವರ್ಷಗಳಲ್ಲಿ ರೈತರಿಗೆ ನೀಡಲಾದ ಒಟ್ಟು ಸಾಲವೆಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ರೈತರಿಗೆ ಕೃಷಿಗೆ ಉಪಯೋಗವಾಗುವ ಉಪಕರಣಗಳ ಖರೀದಿಗೆ ಕಳೆದ ೨ ವರ್ಷಗಳಲ್ಲಿ ಎಷ್ಟು ಸಾಲ ನೀಡಲಾಗಿದೆ ಮತ್ತು ಯಾವ ಯಾವ ಉಪಕರಣಗಳ ಖರೀದಿಗೆ ಸಾಲ ನೀಡಲಾಗಿದೆ ? (ವಿವರ ಒದಗಿಸುವುದು)

## KIADB ವತಿಯಿಂದ ಕೈಗಾರಿಕೆಗಳಿಗೆ ಜಮೀನು ಹಂಚಿಕೆ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೪೨೨ (೬೦೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಲ್ಲಿ KIADB ವತಿಯಿಂದ ರಾಜ್ಯದಲ್ಲಿ ಎಷ್ಟು ಕೈಗಾರಿಕಾ ಪ್ರದೇಶಾಭಿವೃದ್ಧಿ ನಿರ್ಮಾಣಗೊಳಿಸಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) KIADB ವತಿಯಿಂದ ಕಳೆದ ೨ ವರ್ಷಗಳಲ್ಲಿ ಎಷ್ಟು ಕೈಗಾರಿಕೋದ್ಯಮಗಳಿಗೆ ಜಮೀನು ಹಂಚಿಕೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) KIADB ವತಿಯಿಂದ ಕೈಗಾರಿಕೆಗಳಿಗೆ ಜಮೀನು ಹಂಚಿಕೆ ಮಾಡುವಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡಬೇಕೆಂದು ಷರತ್ತು ವಿಧಿಸಲಾಗುತ್ತದೆಯೇ ; ಹಾಗಿದ್ದಲ್ಲಿ, ಕಳೆದ ೨ ವರ್ಷಗಳಲ್ಲಿ ಎಷ್ಟು ಉದ್ಯೋಗಗಳನ್ನು ಕಲ್ಪಿಸಲಾಗಿದೆ ? (ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ, ಖಾಸಗಿ ಹಾಗೂ ಸಹಕಾರಿ ಸ್ವಾಮ್ಯದ ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೨೩ (೫೧೫) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸಕ್ಕರೆ ಕಾರ್ಖಾನೆಗಳಿವೆ; ಅವುಗಳಲ್ಲಿ ಸರ್ಕಾರಿ, ಖಾಸಗಿ ಹಾಗೂ ಸಹಕಾರಿ ಸ್ವಾಮ್ಯದಲ್ಲಿರುವ ಕಾರ್ಖಾನೆಗಳು ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಯಾವ ಯಾವ ಸಕ್ಕರೆ ಕಾರ್ಖಾನೆಗಳು ಎಷ್ಟೆಷ್ಟು ಹಣ ಪಾವತಿಸಲು ಬಾಕಿ ಉಳಿಸಿಕೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರೈತರು ಕಬ್ಬು ಸರಬರಾಜು ಮಾಡಿದ ಎಷ್ಟು ದಿನಗಳ ಒಳಗೆ ಹಣ ಪಾವತಿ ಮಾಡಬೇಕಾಗಿದೆ ;

(ಈ) ಹಣ ಪಾವತಿ ಮಾಡದೆ ಇರುವ ಕಾರ್ಖಾನೆಗಳಿಗೆ ಇನ್ನು ಎಷ್ಟು ದಿನದೊಳಗೆ ಹಣ ಪಾವತಿಸಲು ಸರ್ಕಾರ ಆದೇಶ ಮಾಡಿದೆ ;

(ಉ) ಗಡುವು ಮುಗಿದರೂ ಹಣ ಪಾವತಿ ಮಾಡದೆ ಇರುವ ಕಾರ್ಖಾನೆಗಳ ಮೇಲೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಳ್ಳುವುದು; ಇದುವರೆವಿಗೂ ಯಾವ ಯಾವ ಕಾರ್ಖಾನೆಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ ? (ವಿವರಗಳನ್ನು ಒದಗಿಸುವುದು)

## ರಾಜ್ಯದಲ್ಲಿರುವ ಪಾರ್ಕ್‌ಗಳ ನಿರ್ವಹಣೆ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೪೨೪ (೫೩೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ನಗರ ಪ್ರದೇಶಗಳಲ್ಲಿರುವ ಪಾರ್ಕ್‌ಗಳ ಸಂಖ್ಯೆ ಎಷ್ಟು ;

(ಆ) ಈ ಪಾರ್ಕ್‌ಗಳ ನಿರ್ವಹಣೆಗೆ ಇರುವ ಮಾನದಂಡಗಳೇನು ;

(ಇ) ರಾಜ್ಯದಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಡಿ ನಿರ್ಮಾಣಗೊಂಡಿರುವ ಪಾರ್ಕ್‌ಗಳ ಸಂಖ್ಯೆ ಎಷ್ಟು ;

(ಈ) ಸ್ಮಾರ್ಟ್ ಸಿಟಿ ಯೋಜನೆಯಡಿ ನಿರ್ಮಾಣಗೊಂಡಿರುವ ಪಾರ್ಕ್‌ಗಳನ್ನು ಪೂರ್ಣ ಪ್ರಮಾಣದಲ್ಲಿ ಹಸ್ತಾಂತರ ಮಾಡಲಾಗಿದೆಯೇ ;

(ಉ) ಹಸ್ತಾಂತರಗೊಂಡಿರುವ ಪಾರ್ಕ್‌ಗಳ ಉನ್ನತೀಕರಣಕ್ಕೆ ವೆಚ್ಚ ಮಾಡಲಾಗಿರುವ ಹಣವೆಷ್ಟು ?

## ಹಟ್ಟಿ ಪಟ್ಟಣ ಪಂಚಾಯಿತಿಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೨೫ (೫೮೨) ಮಾನ್ಯ ಪೌರಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಟ್ಟಿ ಪಟ್ಟಣ ಪಂಚಾಯಿತಿಯನ್ನು ಮೇಲ್ದರ್ಜೆಗೇರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಅಲ್ಲಿನ ಜನರು ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಸದರಿ ಪಂಚಾಯಿತಿಯನ್ನು ಪುರಸಭೆಯಾಗಿ ಅಥವಾ ನಗರ ಸಭೆಯಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ಇದನ್ನು ಮೇಲ್ದರ್ಜೆಗೇರಿಸಲು ಸರ್ಕಾರವು ಚಿಂತಿಸುವುದು ? (ವಿವರ ನೀಡುವುದು)

## ಹಟ್ಟಿ ಚಿನ್ನದ ಗಣಿ ಕಂಪನಿಯ ನಿಯಮಿತ ಸ್ಥಳೀಯ ವೃಂದ ಮತ್ತು ಸ್ಥಳೀಯೇತರ ನೇಮಕಾತಿ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೨೬ (೫೮೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದಲ್ಲಿ ದಿನಾಂಕ:೧೫.೦೩.೨೦೨೪, ಸಂ:೧೦೧೨೩.೨೪ ಸ್ಥಳೀಯ ವೃಂದ ಮತ್ತು ಸ್ಥಳೀಯೇತರ ವೃಂದ ನೇಮಕಾತಿಗಾಗಿ ಅರ್ಜಿ ಕರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನೇಮಕಾತಿ ಪ್ರಕ್ರಿಯೆ ನಡೆಯದಿರಲು ಕಾರಣವೇನು ;

(ಆ) ನೇಮಕಾತಿ ಪ್ರಕ್ರಿಯೆ ವಿಳಂಬ ಮಾಡಿ ಅಭ್ಯರ್ಥಿಗಳ ಭವಿಷ್ಯದಲ್ಲಿ ಹಟ್ಟಿ ಚಿನ್ನದ ಗಣಿ ಕಂಪನಿ ಆಟವಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ನೇಮಕಾತಿ ಪ್ರಕ್ರಿಯೆ ಚಾಲನೆ ನೀಡಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಪತ್ರ ನೀಡುವುದು ಯಾವಾಗ ? (ವಿವರ ನೀಡುವುದು)

## ಅಕ್ರಮ ಮರಳು ದಂಧೆಯ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೨೭ (೫೮೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಅಕ್ರಮ ಮರಳು ದಂಧೆಯಿಂದ ರಾಜ್ಯದ ನದಿ ತೀರಗಳು ಹಾಗೂ ಅರಣ್ಯ ಪ್ರದೇಶ ಬರಡು ಭೂಮಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನದಿ ಹಾಗೂ ಅರಣ್ಯ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಅಕ್ರಮ ಮರಳು ದಂಧೆಯಿಂದ ರಾಜ್ಯ ಸರ್ಕಾರಕ್ಕೆ ದೊಡ್ಡ ಮೊತ್ತದ ಆದಾಯ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು ?

## ಕೆ.ಐ.ಎ.ಡಿ.ಬಿ. ಯಲ್ಲಿ ರಿಯಾಯಿತಿ ದರದಲ್ಲಿ ಕೈಗಾರಿಕೆ ನಿವೇಶನ ಹಂಚಿಕೆ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೨೮ (೫೮೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೆ.ಐ.ಎ.ಡಿ.ಬಿ. ಮಂಡಳಿಯಲ್ಲಿ ಕೈಗಾರಿಕೆ ಸ್ಥಾಪಿಸಲು ನಿವೇಶನ ಹಂಚಿಕೆಯ ಪ್ರಕ್ರಿಯೆಗಳಾವುವು ; (ವಿವರ ನೀಡುವುದು)

(ಆ) ಸದರಿ ಮಂಡಳಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ಉದ್ಯಮಿಗಳಿಗೆ ನೀಡುತ್ತಿರುವ ರಿಯಾಯಿತಿಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ವರ್ಗಗಳಿಗೆ ಯಾವ ದಿನಾಂಕದಿಂದ ರಿಯಾಯಿತಿಯನ್ನು ನೀಡಲಾಗಿದೆ ; ಸದರಿ ರಿಯಾಯಿತಿಯಡಿ ಇಲ್ಲಿಯವರೆಗೂ ಎಷ್ಟು ಕೈಗಾರಿಕಾ ನಿವೇಶನಗಳನ್ನು ಹಂಚಲಾಗಿದೆ ; (ಉದ್ಯಮಿ ಹೆಸರು, ಉದ್ಯಮದ ವಿಳಾಸ, ಅದರ ಮೌಲ್ಯ ರಿಯಾಯಿತಿ ನೀಡಿರುವ ಮೊತ್ತ ಮತ್ತು ಬಾಕಿ ಪಾವತಿ ಮಾಡಿರುವ ಮೊತ್ತ ಒಳಗೊಂಡಂತೆ ವರ್ಷವಾರು, ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಈ) ಈ ರಿಯಾಯಿತಿಗಳನ್ನು ಪ್ರವರ್ಗ ೩ ಎ ಮತ್ತು ೩ ಬಿ ಉದ್ಯಮಿಗಳಿಗೆ ನೀಡಲಾಗುತ್ತಿದೆಯೇ ? (ವಿವರವಾದ ಮಾಹಿತಿ ನೀಡುವುದು)

## ಬಂಡವಾಳ ಹೂಡಿಕೆ ಸಮಾವೇಶದಲ್ಲಿ ಭಾಗವಹಿಸಿದ ಕಂಪನಿಗಳ ಬಗ್ಗೆ

**ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೯ (೫೦೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) 'ಇನ್ವೆಸ್ಟ್ ಕರ್ನಾಟಕ–೨೦೨೫ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶಕ್ಕಾಗಿ ಸರ್ಕಾರದಿಂದ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ಹಾಗೂ ಕಳೆದ ಸಾಲಿನ ಸಮಾವೇಶಕ್ಕೆ ವೆಚ್ಚ ಮಾಡಿದ ಮೊತ್ತವೆಷ್ಟು ; (ವಿವರಗಳನ್ನು ಒದಗಿಸುವುದು)

(ಆ) ಪ್ರಸ್ತುತ ಸಾಲಿನ ಸಮಾವೇಶದಲ್ಲಿ ಭಾಗವಹಿಸಿದ ಕಂಪನಿಗಳು ಯಾವುವು ; ಎಷ್ಟು ಕಂಪನಿಗಳು ರಾಜ್ಯದಲ್ಲಿ ಬಂಡವಾಳ ಹೂಡಲು ಒಡಂಬಡಿಕೆಗೆ ಸಹಿ ಮಾಡಿದ್ದಾರೆ ; ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕಂಪನಿ ಪ್ರಾರಂಭಿಸುವ ಉದ್ದೇಶ ಹೊಂದಿದ್ದಾರೆ ; (ಕಂಪನಿಯ ವಿವರಗಳು, ಬಂಡವಾಳದ ಮೊತ್ತ ವಿವರ ನೀಡುವುದು)

(ಇ) ಬಂಡವಾಳ ಹೂಡುವ ಕಂಪನಿಗಳಿಗೆ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗುವುದು ; ಎಷ್ಟು ಉದ್ಯೋಗಗಳು ಸೃಷ್ಟಿಯಾಗಬಹುದು ;

(ಈ) ಈ ಹಿಂದೆ ನಡೆದಂತಹ ಸಮಾವೇಶನದಲ್ಲಿ ಒಡಂಬಡಿಕೆಗೆ ಸಹಿ ಮಾಡಿರುವ ಕಂಪನಿಗಳು ಪ್ರಾರಂಭಗೊಂಡಿದೆಯೇ ; ಎಷ್ಟು ನಿರುದ್ಯೋಗಿಗಳಿಗೆ ಉದ್ಯೋಗ ದೊರಕಿದೆ ;

(ಉ) ಉತ್ತರ ಕನ್ನಡ ಜಿಲ್ಲೆಯಲ್ಲಿ ಸುಮಾರು ೩೦ ಕ್ಕೂ ಅಧಿಕ ಕಂಪನಿಗಳು ಮುಂದೆ ಬಂದಿದ್ದು, ಆದರೆ ಅವರಿಗೆ ಜಮೀನು ನೀಡಲು ಜಿಲ್ಲಾಡಳಿತದಲ್ಲಿ ಜಮೀನು ಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ, ಬಂದಿದೆಯೇ ;

(ಊ) ಕೋಲಾರ ಜಿಲ್ಲೆಯಲ್ಲಿ ಸಾಕಷ್ಟು ಪ್ರಮಾಣದಲ್ಲಿ ಕೈಗಾರಿಕಾ ಪ್ರದೇಶದ ಜಮೀನುಗಳು ಲಭ್ಯವಿದ್ದು ಇದನ್ನು ಬಳಸಿಕೊಳ್ಳಲಾಗುತ್ತಿದೆಯೇ ?

## ಕೊಪ್ಪಳ ಜಿಲ್ಲೆಯ ಕೈಗಾರಿಕೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೩೦ (೫೭೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಜರುಗಿದ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಹೂಡಿಕೆ ಮಾಡಲು ಒಪ್ಪಂದ ಮಾಡಿಕೊಂಡಿರುವ ಕೈಗಾರಿಕೆಗಳು ಯಾವುವು ; (ವಿವರ ನೀಡುವುದು)

(ಆ) ಸದರಿ ಸಮಾವೇಶದಲ್ಲಿ ಬಲ್ಡೋಟಾ ಕಂಪನಿಯವರು ಉಕ್ಕು ಕಾರ್ಖಾನೆ ಸ್ಥಾಪನೆ ಮಾಡಲು ಮುಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈಗಾಗಲೇ ಅವರ ಕೈಗಾರಿಕೆಯಿಂದ ಕೊಪ್ಪಳ ನಗರವು ಪರಿಸರ ಮಾಲಿನ್ಯದಿಂದ ತತ್ತರಿಸುತ್ತಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಕೈಗಾರಿಕೆಗಳಿಗೆ ಮತ್ತೆ ವಿಸ್ತರಿಸಲು ಅವಕಾಶ ನೀಡಲು ಕಾರಣವೇನು; (ವಿವರ ನೀಡುವುದು)

(ಇ) ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಬಲ್ಡೋಟಾ ಕೈಗಾರಿಕೆಯಲ್ಲಿ ಎಷ್ಟು ಜನ ಉದ್ಯೋಗಿಗಳು ಕೆಲಸ ನಿರ್ವಹಿಸುತ್ತಿದ್ದಾರೆ; ವಿವಿಧ ವೃಂದದಲ್ಲಿ ಕಾರ್ಯನಿರ್ವಹಿಸುತ್ತಿರುವ ಉದ್ಯೋಗಿಗಳಲ್ಲಿ ಸ್ಥಳೀಯ ಕೊಪ್ಪಳ ಉದ್ಯೋಗಿಗಳೇಷ್ಟು; ಅದರಲ್ಲಿ ರಾಜ್ಯದ ಉದ್ಯೋಗಿಗಳೇಷ್ಟು; ಹೊರರಾಜ್ಯದ ಉದ್ಯೋಗಿಗಳೆಷ್ಟು; (ವಿವರ ನೀಡುವುದು)

(ಈ) ಬಲ್ಡೋಟಾ ಕಂಪನಿ ವಿಸ್ತರಣೆಗೆ ಸ್ಥಳೀಯವಾಗಿ ವಿರೋಧ ವ್ಯಕ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು?

## ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩೧ (೫೭೭) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ರಾಜ್ಯದಲ್ಲಿರುವ ಸರ್ಕಾರಿ ಸ್ವಾಮ್ಯದ ಸಕ್ಕರೆ ಕಾರ್ಖಾನೆಗಳು ಯಾವುವು; ಹೊಸದಾಗಿ ಸ್ಥಾಪನೆ ಮಾಡಲು ಉದ್ದೇಶಿಸಿರುವ ಕಾರ್ಖಾನೆಗಳು ಯಾವುವು; (ಮಾಹಿತಿ ನೀಡುವುದು)

(ಆ) ಪ್ರಸ್ತುತ ಲಾಭ ಮತ್ತು ನಷ್ಟದಲ್ಲಿರುವ ಕಾರ್ಖಾನೆಗಳು ಯಾವುವು ;

(ಇ) ಸಕ್ಕರೆಯ ಗುಣಮಟ್ಟವನ್ನು ಕಾಯ್ದುಕೊಳ್ಳುವಲ್ಲಿ ಕಾರ್ಖಾನೆಗಳು ವಿಫಲವಾಗಿದ್ದು, ಸರ್ಕಾರ ಇದರ ಬಗ್ಗೆ ಕೈಗೊಂಡಿರುವ ಕ್ರಮವೇನು ?

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ೨೪x೭ ನೀರು ಸರಬರಾಜು ಮಾಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩೨ (೫೧೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ೨೪x೭ ನೀರು ಸರಬರಾಜು ಮಾಡಲು ಜಲಸಿರಿ ಯೋಜನೆ ಕಾಮಗಾರಿ ಪ್ರಗತಿಯಲ್ಲಿದ್ದು ಈ ಕಾಮಗಾರಿಗೆ ತಗಲುವ ವೆಚ್ಚ ಎಷ್ಟು;

(ಆ) ಯಾವ ಯಾವ ಮೂಲಗಳಿಂದ ಹಣವನ್ನು ಸಂಗ್ರಹಿಸಲಾಗುತ್ತದೆ ; ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು; (ವಿವರ ನೀಡುವುದು)

(ಇ) ಜಲಸಿರಿ ಮೂಲಕ ಕುಡಿಯುವ ನೀರಿನ ಎಷ್ಟು ಶುದ್ಧೀಕರಣ ಘಟಕಗಳನ್ನು ಅಳವಡಿಸಲಾಗಿದೆ ; ಲೀಟರ್ ಒಂದಕ್ಕೆ ತಗಲುವ ಖರ್ಚು ಎಷ್ಟು ;

(ಈ) ಈ ಯೋಜನೆಗಾಗಿ ಹಣದ ಸಂಪನ್ಮೂಲಗಳನ್ನು ಯಾವ ಮೂಲಗಳಿಂದ ಸಂಗ್ರಹಿಸಲಾಗುತ್ತದೆ ; ಬಳಕೆದಾರರ ಮೇಲೆ ಹೆಚ್ಚಿನ ಹೊರೆ ಹಾಕಲಾಗಿದೆಯೇ ; (ವಿವರ ನೀಡುವುದು)

(ಉ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗಾಗಿ ಸರಬರಾಜುನಿಂದ ನಗರಪಾಲಿಕೆಗೆ ಇರುವ ಆದಾಯ ಎಷ್ಟು; ಒಟ್ಟು ವಾರ್ಷಿಕ ಆದಾಯ ತಗಲುವ ಖರ್ಚು ಹಾಗೂ ಉಳಿತಾಯ ಎಷ್ಟು? (ವಿವರ ನೀಡುವುದು)

## ರಾಜ್ಯದ ಮಹಾನಗರ ಪಾಲಿಕೆ, ನಗರಸಭೆ ಪುರಸಭೆಗಳ ಮಾಹಿತಿ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

ಳ೩೩ (೫೩೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ಮಹಾನಗರ ಪಾಲಿಕೆಗಳು, ನಗರ ಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ಈ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; (ವೃಂದವಾರು ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳಿಗೆ ಸರ್ಕಾರದಿಂದ ಬಿ-ಖಾತೆಯನ್ನು ನೀಡಲು ನಿಗಧಿಪಡಿಸಿರುವ ದಾಖಲೆಗಳು ಯಾವುವು;

(ಈ) ಪ್ರಸ್ತುತ ಸರ್ಕಾರ ಹೇಳಿರುವ ದಾಖಲೆಗಳಿಗಿಂತ ಹೆಚ್ಚು ದಾಖಲಾತಿಗಳನ್ನು ನೀಡುವಂತೆ ಆಸ್ತಿ ಮಾಲೀಕರಿಗೆ ಅಧಿಕಾರಿಗಳು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಉ) ಸರ್ಕಾರದಿಂದ ಅನಧಿಕೃತ ಬಡಾವಣೆಗಳಲ್ಲಿನ ನಿವೇಶನಗಳಿಗೆ ಬಿ–ಖಾತೆಯನ್ನು ವಿತರಿಸಿದ ನಂತರ ಆಸ್ತಿಗಳ ಮಾಲೀಕರಿಗೆ ಸರ್ಕಾರದ ಮೂಲಭೂತ ಸೌಲಭ್ಯಗಳು ದೊರೆಯುತ್ತವೆಯೇ ; ಅಂತಹ ಸೌಲಭ್ಯಗಳು ಯಾವುವು? (ವಿವರ ನೀಡುವುದು)

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ಮಾರ್ಟ್ ಸಿಟಿ ಯೋಜನೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೩೪ (೫೧೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ಮಾರ್ಟ್ ಸಿಟಿ ಯೋಜನೆ ಅನ್ವಯ ಕೈಗೊಂಡ ಕಾಮಗಾರಿಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳು ಯಾವುವು ; ಇದಕ್ಕೆ, ತಗುಲಿದ ವೆಚ್ಚ, ಎಷ್ಟು ;

(ಆ) ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಕೈಗೊಂಡ ಎಷ್ಟು ಕಾಮಗಾರಿಗಳು ಪ್ರಗತಿಯಲ್ಲಿದೆ ; ಪ್ರಾರಂಭಿಸದೇ ಇರುವ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಇ) ನಗರಪಾಲಿಕೆ ವ್ಯಾಪ್ತಿಯಲ್ಲಿ ಫುಟ್‌ಬಾಲ್ ಮೈದಾನ ಟರ್ಫ್ ಕಾಮಗಾರಿ ಎಂದು ಪ್ರಾರಂಭಗೊಳ್ಳುವುದು ; ಈ ಯೋಜನೆ ಮುಕ್ತಾಯಗೊಳಿಸಲು ತೆಗೆದುಕೊಳ್ಳುವ ಕಾಲಾವಧಿ ಎಷ್ಟು ; (ವಿವರ ನೀಡುವುದು)

(ಈ) ನಗರಪಾಲಿಕೆ ವ್ಯಾಪ್ತಿಯಲ್ಲಿ ಸ್ಮಾರ್ಟ್ ಸಿಟಿ ಅನ್ವಯ ಕದ್ರಿ ಪಾರ್ಕ್ ಮತ್ತು ಸುತ್ತಮುತ್ತಲಿನ ನವೀಕರಣಕ್ಕಾಗಿ ಮಾಡಿದ ಖರ್ಚು ಎಷ್ಟು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಾಗಿ ಭೂ ಸ್ವಾಧೀನ ಪಡೆಯುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩೫ (೫೧೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಳಿಗಾಗಿ ಎಷ್ಟು ಭೂಮಿಯನ್ನು ಸಾರ್ವಜನಿಕರಿಂದ ಪಡೆದುಕೊಳ್ಳಲು ತೀರ್ಮಾನಿಸಲಾಗಿದೆ ; ಯಾವ ಯಾವ ಯೋಜನೆಗಳಿಗಾಗಿ ಭೂ ಸ್ವಾಧೀನ ಮಾಡಲಾಗಿದೆ ; (ವಿವರ ನೀಡುವುದು)

(ಆ) ಕೆ.ಐ.ಎ.ಡಿ.ಬಿ ನಿಂದ ಕೈಗಾರಿಕೆಗಾಗಿ ವಶಪಡಿಸಿಕೊಂಡಿರುವ ಭೂಮಿಯು ಅದರ ಉದ್ದೇಶಕ್ಕಾಗಿ ಬಳಕೆ ಮಾಡದೇ ಇದ್ದಾಗ ಅದನ್ನು ಮತ್ತೆ ಜಮೀನುದಾರರಿಗೆ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ; ಈ ಬಗ್ಗೆ ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ಬೃಹತ್ ಕೈಗಾರಿಕೆಗಾಗಿ ಪ್ರಸ್ತುತ ಯಾವ ಯಾವ ಯೋಜನೆಗಾಗಿ ಯಾವ ಪ್ರದೇಶಗಳಲ್ಲಿ ಭೂ ಸ್ವಾಧೀನ ಪ್ರಕ್ರಿಯೆ ಚಾಲ್ತಿಯಲ್ಲಿದೆ ? (ವಿವರ ನೀಡುವುದು)

## ಅಡಿಕೆ ಬೆಳೆಗಾರರಿಗೆ ಸಂಶೋಧನೆ ಕೇಂದ್ರ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩೬ (೫೧೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಡಿಕೆ ಕೃಷಿಗೆ ಚುಕ್ಕೆ ರೋಗ ತಗಲಿ ಉಂಟಾದ ನಷ್ಟವನ್ನು ಸರ್ಕಾರ ಅಂದಾಜು ಮಾಡಲಾಗುತ್ತಿದೆಯೇ ; ಈ ಬಗ್ಗೆ ರೈತರಿಗೆ ನೀಡಿದ ನೆರವು ಎಷ್ಟು; (ವಿವರ ನೀಡುವುದು)

(ಆ) ಕರ್ನಾಟಕ ಭಾಗದ ಅನೇಕ ಅಡಿಕೆ ತೋಟಗಳಲ್ಲಿ ಅಡಿಕೆ ಮರಗಳು ರೋಗಕ್ಕೆ ಬಲಿಯಾಗುತ್ತಿದ್ದು ಫಸಲು ನೀಡದೇ ರೈತರಿಗೆ ಉಂಟಾದ ತೊಂದರೆಗಳನ್ನು ನಿವಾರಿಸಲು ಅಡಿಕೆ ಬೆಳೆಗಾರರಿಗೆ ಸಂಶೋಧನೆ ಕೇಂದ್ರ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ದೇಶದಲ್ಲಿಯೇ ಅತ್ಯಂತ ಹೆಚ್ಚು ಅಡಿಕೆ ಬೆಳೆ ಉತ್ಪಾದಿಸುವ ರಾಜ್ಯಕ್ಕೆ, ಅಡಿಕೆ ಬೆಳೆಗಾರರಿಗೆ "ಸಂಶೋಧನೆ ಕೇಂದ್ರ" ಮತ್ತು ಮಾರುಕಟ್ಟೆ ದರ ನಿಗಧಿ ಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಈ) ಅಡಿಕೆ ಬೆಳೆಗಾರರ ರಕ್ಷಣೆಗಾಗಿ ಅಡಿಕೆ ಬೆಳೆಗಾರರ ಬೋರ್ಡನ್ನು ರಚಿಸಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಹಿಂದೇಟು ಹಾಕುತ್ತಿರುವ ಉದ್ದೇಶವೇನು ;

(ಉ) ಅಡಿಕೆಗೆ ರಕ್ಷಣೆ ನೀಡಲು ರಾಜ್ಯ ಸರ್ಕಾರ ವಹಿಸಿದ ಪಾತ್ರವೇನು ?

## ಸ್ಮಾರ್ಟ್‌ಸಿಟಿ ಯೋಜನೆ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೩೭ (೫೨೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಡಿ ಯಾವ ಯಾವ ನಗರಗಳಲ್ಲಿ ಅಭಿವೃದ್ಧಿ

ಕಾರ್ಯಗಳನ್ನು ಮತ್ತು ಯಾವ ಕಾಮಗಾರಿಗಳನ್ನು ಮಾಡಲಾಗುತ್ತಿದೆ ; ಈ ಕಾಮಗಾರಿಗಳು ಯಾವ ಹಂತದಲ್ಲಿವೆ ; ಎಷ್ಟು ಅನುದಾನದಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ; (ಜಿಲ್ಲಾವಾರು ಸಂಪೂರ್ಣ ವಿವರ ಒದಗಿಸುವುದು)

(ಆ) ಕಳೆದ ೩ ವರ್ಷಗಳಲ್ಲಿ ಮಂಗಳೂರು ಮತ್ತು ಉಡುಪಿ ನಗರಗಳಲ್ಲಿ ಈ ಯೋಜನೆಯಡಿಯಲ್ಲಿ ಯಾವೆಲ್ಲ ಕಾಮಗಾರಿಗಳನ್ನು ಮಾಡಲಾಗಿದೆ ಖರ್ಚು ಮಾಡಲಾದ ಅನುದಾನವೆಷ್ಟು; (ಕಾಮಗಾರಿಗಳ ವಿವರ, ರಾಜ್ಯ ಸರ್ಕಾರದ ಮತ್ತು ಕೇಂದ್ರ ಸರ್ಕಾರದ ಅನುದಾನ ಪ್ರತ್ಯೇಕ ವಿವರ ನೀಡುವುದು)

(ಇ) ಸದರಿ ಜಿಲ್ಲೆಗಳಿಗೆ ೨೦೨೩-೨೪ನೇ ಸಾಲಿನಲ್ಲಿ ಸ್ಮಾರ್ಟ್ ಸಿಟಿ ಯೋಜನೆಗೆ ಮೀಸಲಿಡಲಾದ ಅನುದಾನವನ್ನು ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಮತ್ತು ಮೀಸಲಿಡಲಾಗಿದೆ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿರುವ ಉದ್ದಿಮೆಗಳು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೩೮ (೫೨೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲ ಸೌಕರ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಎಷ್ಟು ಸಾರ್ವಜನಿಕ/ಖಾಸಗಿ ಉದ್ದಿಮೆಗಳು ಕಾರ್ಯನಿರ್ವಹಿಸುತ್ತಿವೆ ಅವು ಯಾವುವು ; ಈ ಉದ್ದಿಮೆಗಳಿಂದ ಸೃಷ್ಟಿಯಾಗಿರುವ ಉದ್ಯೋಗಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕಂಪನಿಗಳು ಸ್ಥಳೀಯರಿಗೆ ಎನ್ನು ಉದ್ಯೋಗವನ್ನು ನೀಡಿವೆ ಸ್ಥಳೀಯರಿಗೆ ನೇಮಕಾತಿ ಮಾಡಲು ಇರುವ ಮಾನದಂಡವೇನು ; ನಿಯಮದಂತೆ ನೇಮಕಾತಿಗಳಲ್ಲಿ ಸ್ಥಳೀಯರಿಗೆ ಕಡ್ಡಾಯವಾಗಿ ಶೇ. ಎಷ್ಟು ಅವಕಾಶ ನೀಡಬೇಕು ;

(ಇ) ಸದರಿ ಕಂಪನಿಗಳು ಸ್ಥಳೀಯರಿಗೆ ಉದ್ಯೋಗ ನೀಡುವ ನೇಮಕಾತಿ ನಿಯಮಗಳನ್ನು ಪಾಲಿಸಿವೆಯೇ ಎಷ್ಟು ; ಸ್ಥಳೀಯರಿಗೆ ಉದ್ಯೋಗ ನೀಡಿವೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಸ್ಥಳೀಯರಿಗೆ ನೇಮಕಾತಿಗಳಲ್ಲಿ ಅವಕಾಶ ನೀಡದ ಕಂಪನಿಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ ; ಮುಂದಿನ ದಿನಗಳಲ್ಲಿ ಸ್ಥಳೀಯರಿಗೆ ಹೆಚ್ಚಿನ ಉದ್ಯೋಗ ನೀಡುವಂತೆ ಮಾಡಲು ಕೈಗೊಂಡಿರುವ ಕ್ರಮಗಳೇನು ?

## ಗಣಿಗಾರಿಕೆಗಳಿಂದ ರಾಜಧನ ಸಂಗ್ರಹದ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೩೯ (೫೨೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮರಳು ಮತ್ತು ಕಲ್ಲು ಹಾಗೂ ಇತರೆ ಗಣಿಗಾರಿಕೆಗಳಿಂದ ಕಳೆದ ಮೂರು ವರ್ಷಗಳಲ್ಲಿ ಸಂಗ್ರಹವಾಗಿರುವ ರಾಜಧನ (Royalty) ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಗಣಿಗಾರಿಕೆಯಿಂದ ಬಂದ ರಾಜಧನದಿಂದ ಯಾವೆಲ್ಲ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗಿದೆ ; (ವಿವರ ಒದಗಿಸುವುದು)

(ಇ) ರಾಜಧನವನ್ನು ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ಹಂಚಿಕೆ ಮಾಡಲು ಇರುವ ಮಾನದಂಡವೇನು ; ರಾಜಧನವನ್ನು ಹಂಚಿಕೆ ಮಾಡುವ ಪ್ರಾಧಿಕಾರ ಯಾವುದು ;

(ಈ) ಸದರಿ ಜಿಲ್ಲೆಗಳಲ್ಲಿ ಈ ರಾಜಧನದಿಂದ ಕಳೆದ ೩ ವರ್ಷಗಳಲ್ಲಿ ಖರ್ಚು ಮಾಡಲಾಗಿರುವ ಅನುದಾನವೆಷ್ಟು ಹಾಗೂ ಮಾಡಲಾಗಿರುವ ಅಭಿವೃದ್ಧಿ ಕಾರ್ಯಗಳು ಯಾವುವು ? (ತಾಲ್ಲೂಕುವಾರು ಕಾಮಗಾರಿಗಳ ಅನುದಾನದ ವಿವರ ನೀಡುವುದು)

## ಸ್ಟಾರ್ಟಪ್ ಕಂಪನಿಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

ಳಳ೦ (೫೨೫) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಪ್ರಾರಂಭವಾಗಿರುವ ಸ್ಟಾರ್ಟಪ್ ಕಂಪನಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು

(ಆ) ದಕ್ಷಿಣ ಕನ್ನಡ ಉಡುಪಿ ಜಿಲ್ಲೆಗಳಲ್ಲಿ ಕಳೆದ ವರ್ಷಗಳಲ್ಲಿ ಪ್ರಾರಂಭವಾಗಿರುವ ಸ್ಟಾರ್ಟಪ್ ಕಂಪನಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಸದರಿ ಜಿಲ್ಲೆಗಳಲ್ಲಿ ಸ್ಟಾರ್ಟಪ್ ಕಂಪನಿಗಳ ಸ್ಥಾಪನೆಗೆ ಬಂದಿರುವ ಅರ್ಜಿಗಳೆಷ್ಟು ; ಅನುಮತಿ ನೀಡಲಾಗಿರುವ ಹಾಗೂ ಅನುಮತಿಯನ್ನು ನಿರಾಕರಿಸಲಾಗಿರುವ ಸ್ಟಾರ್ಟಪ್‌ಗಳು ಯಾವುವು ; (ವಿವರ ಒದಗಿಸುವುದು)

(ಈ) ಸದರಿ ಜಿಲ್ಲೆಗಳಲ್ಲಿ ಈ ಸ್ಟಾರ್ಟಪ್ ಗಳಿಂದ ಸೃಷ್ಟಿಯಾಗಿರುವ ಉದ್ಯೋಗಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ಒದಗಿಸುವುದು)

## ವಿಜಯಪುರ ಜಿಲ್ಲೆಯ ಉದ್ಯಮಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೪೧ (೫೪೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಈ ಕೈಗಾರಿಕೆಗಳಲ್ಲಿ ಉದ್ಯೋಗ ಮಾಡುತ್ತಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಇ) ವಿಜಯುಪುರ ಜಿಲ್ಲೆಯ ಯಾವ ಯಾವ ತಾಲ್ಲೂಕಿನಲ್ಲಿ ಕೈಗಾರಿಕೆಗಳನ್ನು ಪ್ರಾರಂಭಿಸಲು ಸರ್ಕಾರಕ್ಕೆ ಪ್ರಸ್ತಾವನೆಗಳು ಬಂದಿದೆ; ಬಂದಿದ್ದರೆ, ಸಂಪೂರ್ಣ ವಿವರ ನೀಡುವುದು;

(ಈ) ಸದರಿ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಅನುಕೂಲವಿರುವುದರಿಂದ ಸರ್ಕಾರದ ವತಿಯಿಂದ ಯಾವುದಾದರೂ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶ ಇದೆಯೇ ? (ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಸಾರ್ವಜನಿಕ ಉದ್ಯಮಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೪೨ (೫೪೭) ಮಾನ್ಯ ಸಣ್ಣ ಕೈಗಾರಿಕಾ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಾರ್ವಜನಿಕ ಉದ್ಯಮಗಳು ಯಾವುವು ; ಅವುಗಳ ಆರ್ಥಿಕ ಸ್ಥಿತಿಗತಿಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಉದ್ಯಮಗಳಲ್ಲಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಕನ್ನಡಿಗರ ಸಂಖ್ಯೆ ಎಷ್ಟು ; ನಷ್ಟದಲ್ಲಿರುವ ಉದ್ಯಮಗಳ ಬಗ್ಗೆ ಸರ್ಕಾರದ ಮುಂದಿನ ನಡೆ ಏನು ; (ಮಾಹಿತಿ ನೀಡುವುದು)

(ಇ) ಹೊಸದಾಗಿ ಸಣ್ಣ ಕೈಗಾರಿಕೆ ಪ್ರಾರಂಭ ಮಾಡುವ ಕೈಗಾರಿಕೆಗಳಿಗಿರುವ ಮಾನದಂಡಗಳೇನು ; ಸಣ್ಣ ಕೈಗಾರಿಕೆ ಇಲಾಖೆ ವತಿಯಿಂದ ಪ್ರೋತ್ಸಾಹಗಳೇನು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳಿಂದ ಇಲ್ಲಿಯವರೆಗೆ ಎಷ್ಟು ಜನರಿಗೆ ಉದ್ಯೋಗ ಲಭಿಸಿದೆ ; (ವಿವರ ನೀಡುವುದು)

(ಉ) ಸಣ್ಣ ಕೈಗಾರಿಕೆ ಇಲಾಖೆಯಲ್ಲಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆಗಳೆಷ್ಟು ; ಖಾಲಿಯಿರುವ ಹುದ್ದೆಗಳೆಷ್ಟು ; ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸಹಕಾರ ಸಂಘಗಳ ರೂ.೧ ಲಕ್ಷ ಸಾಲಮನ್ನಾ ಯೋಜನೆಯಲ್ಲಿ ಹಣ ಬಿಡುಗಡೆ ಆಗದಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೪೪೩ (೫೧೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ, ಹಾಸನ, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಸಹಕಾರ ಸಂಘಗಳ ರೂ. ೧ ಲಕ್ಷಗಳ ಸಾಲ ಮನ್ನಾ ಯೋಜನೆಯಲ್ಲಿ ಗುರುತಿಸಲ್ಪಟ್ಟ ರೈತರ ಸಂಖ್ಯೆ ಎಷ್ಟು ;

(ಆ) ಇದರಲ್ಲಿ ಹಸಿರು ಪಟ್ಟಿಗೆ ಸೇರ್ಪಡೆಯಾದ ಅರ್ಹ ರೈತರ ಸಂಖ್ಯೆ, ಈವರೆಗೆ ಪಾವತಿಸಲಾದ ಒಟ್ಟು ಮೊತ್ತ ಉಳಿತಾಯ ಖಾತೆ ತಪ್ಪಾಗಿ ಹಿಂದಿರುಗಿಸಲ್ಪಟ್ಟ ಪ್ರಕರಣಗಳ ಸಂಖ್ಯೆ, ಹಸಿರು ಪಟ್ಟಿಯಲ್ಲಿದ್ದರೂ ಹಣ ಬಿಡುಗಡೆ ಆಗದ ಪ್ರಕರಣಗಳು ಹಾಗೂ ಹಸಿರು ಪಟ್ಟಿಗೆ ಗುರುತಿಸಬೇಕಾದ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಸಿರು ಪಟ್ಟಿಯಲ್ಲಿದ್ದು ಸಾಲ ಮನ್ನಾ ಮಾಡಲು ಅರ್ಹತೆ ಗುರುತಿಸಿರುವ ಪ್ರಕರಣಗಳಲ್ಲಿ ಹಣ ಬಿಡುಗಡೆ ಸಂಬಂಧ ಪರಿಶೀಲನೆಯಲ್ಲಿದ್ದ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯು ಹಣ ಬಿಡುಗಡೆ ಮಾಡುವಮೂಲಕ ವಿಲೇ ಮಾಡಿದೆಯೇ ;

(ಈ) ಇಲ್ಲದಿದ್ದಲ್ಲಿ, ಕಾರಣಗಳೇನು ; ಆರ್ಥಿಕ ಇಲಾಖೆ ಬಳಿ ಸದರಿ ಪ್ರಸ್ತಾವನೆಯು ಎಷ್ಟು ವರ್ಷಗಳಿಂದ ಬಾಕಿ ಇದೆ ; (ಮಾಹಿತಿ ನೀಡುವುದು )

(ಉ) ಉಳಿತಾಯ ಖಾತೆ ತಪ್ಪಾಗಿ ಹಣ ಪಾವತಿಸಲು ಬಾಕಿ ಇದ್ದ ಪ್ರಕರಣಗಳನ್ನು ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಇವರಿಗೆ ಸಲ್ಲಿಸಿ ಸರಿಪಡಿಸಲು ಕ್ರಮ ವಹಿಸಲಾಗಿದೆಯೇ ; ವಿಳಂಬಕ್ಕೆ ಕಾರಣಗಳೇನು ;

(ಊ) ಸರ್ಕಾರದ ಸಾಲ ಮನ್ನಾ ಯೋಜನೆಯನ್ನು ಫಲಾನುಭವಿ ರೈತರಿಗೆ ತಲುಪಿಸಲು ರೈತರನ್ನು ಹಸಿರು ಪಟ್ಟಿಗೆ ಗುರುತಿಸಲು ವಿಳಂಬಕ್ಕೆ ಕಾರಣಗಳೇನು ; ಒಟ್ಟು ಪ್ರಕರಣಗಳೆಷ್ಟು ಹಾಗೂ ಅರ್ಹತೆ ಗುರುತಿಸಲು ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಮಂಡ್ಯ ದಿ ಮೈಸೂರು ಷುಗರ್ ಕಂಪನಿ ಲಿ., ಗೆ ಸರ್ಕಾರ ನೀಡಿರುವ ಸಾಲದ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೪೪೪೪ (೫೧೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯದ ದಿ ಮೈಸೂರು ಷುಗುರ್ ಕಂಪನಿ ಲಿ., ಕಾರ್ಖಾನೆಗೆ ದುಡಿಯುವ ಬಂಡವಾಳ/ ಪುನಃಶ್ವೇತನ ಸೇರಿದಂತೆ ಇನ್ನಿತರೆ ಹೆಸರಿನಲ್ಲಿ ಕಾರ್ಖಾನೆಗೆ ಈವರೆವಿಗೂ ರಾಜ್ಯ ಸರ್ಕಾರ ನೀಡಿರುವ ಸಾಲದ ಮೊತ್ತ ಎಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಆ) ಈ ಸಂಬಂದ ಹಣ ಬಳಕೆ ಉಪಯುಕ್ತತಾ ಪ್ರಮಾಣ ಪತ್ರದ ಪ್ರತಿ ನೀಡುವುದು ;

(ಇ) ಪ್ರಸ್ತುತ, ಸದರಿ ಕಾರ್ಖಾನೆ ಮೇಲಿರುವ ಒಟ್ಟು ಸಾಲದ ಮೊತ್ತ ಎಷ್ಟು ;

(ಈ) ಸದರಿ ಕಾರ್ಖಾನೆಯು ಲಾಭ ಅಥವಾ ನಷ್ಟದಲ್ಲಿರುವ ಕುರಿತು ಮಾಹಿತಿ ನೀಡುವುದು ; ಪ್ರಸಕ್ತ ಸಾಲಿನ ಆಡಿಟ್ ವರದಿ ಅಂತಿಮಗೊಂಡಿಲ್ಲದಿದ್ದರೆ ಈ ಹಿಂದೆ ನಡೆದ ಆಡಿಟ್ ವರದಿ ಪ್ರಕಾರ ಮಾಹಿತಿ ನೀಡುವುದು ;

(ಉ) ದಿ ಮೈಸೂರು ಷಗುರ್ ಕಂಪನಿ ಲಿ., ಗೆ ಸೇರಿದ ಬೆಂಗಳೂರಿನಲ್ಲಿರುವ ಸ್ಥಿರಾಸ್ತಿ ಮೂಲಕ ವಾರ್ಷಿಕವಾಗಿ ದೊರೆಯುತ್ತಿರುವ ಮೊತ್ತ ಎಷ್ಟು? (ಕಳೆದ ೫ ವರ್ಷಗಳ ಮಾಹಿತಿ ನೀಡುವುದು)

## ಬೆಂಗಳೂರಿಗೆ ೨ನೇ ವಿಮಾನ ನಿಲ್ದಾಣ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೪೪೪೫ (೫೨೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲ ಸೌಕರ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿಗೆ ೨ನೇ ವಿಮಾನ ನಿಲ್ದಾಣ ಸಂಬಂಧ ಸ್ಥಳಗಳ ಆಯ್ಕೆ/ ಗುರುತಿಸುವಿಕೆ ಕಾರ್ಯ ನಡೆದಿದೆಯೇ ;

(ಆ) ಇದ್ದಲ್ಲಿ, ಯಾವ ಯಾವ ಸ್ಥಳಗಳನ್ನು ಆಯ್ಕೆ ಮಾಡಲಾಗಿದೆ ವಿವರ ನೀಡುವುದು ; ಈ ಸ್ಥಳಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಯಾವ ಯಾವ ಅಂಶಗಳನ್ನು ಆಧರಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಸ್ಥಳಗಳ ಅನುಮೋದನೆ ಕೋರಿ ಕೇಂದ್ರ ಸರ್ಕಾರಕ್ಕೆ (Airports Authority of India ) ಗೆ ಶಿಫಾರಸ್ಸು ಮಾಡಲಾಗಿದೆಯೇ ;

(ಈ) ಇದ್ದಲ್ಲಿ, ಶಿಫಾರಸ್ಸು ಮಾಡಲಾದ ಪ್ರಸ್ತಾವನೆಯಲ್ಲಿ ಹೆಸರಿಸಲಾಗಿರುವ ಸ್ಥಳಗಳು ಯಾವುವು ? (ಸಂಪೂರ್ಣ ಮಾಹಿತಿ ನೀಡುವುದು)

## ರೈಲ್ವೆ ರಕ್ಷಣಾಪಡೆಯಿಂದ ಮಕ್ಕಳನ್ನು ರಕ್ಷಿಸಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೪೪೪೬ (೫೨೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲ ಸೌಕರ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೈಲ್ವೆ ರಕ್ಷಣಾ ಪಡೆ (Railway Protection Force (RPF)) ವತಿಯಿಂದ ಕಳೆದ ೫ ವರ್ಷಗಳಲ್ಲಿ ರಾಜ್ಯದಲ್ಲಿ ರಕ್ಷಿಸಲ್ಪಟ್ಟ ಮಕ್ಕಳ ಸಂಖ್ಯೆ ಎಷ್ಟು; ಇದರಲ್ಲಿ ಬಾಲಕಿಯರ ಸಂಖ್ಯೆ ಎಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಆ) ಅದೇ ರೀತಿ, ಈ ಅವಧಿಯಲ್ಲಿ ಎಷ್ಟು ಮಹಿಳಾ ಪ್ರಯಾಣಿಕರಿಗೆ ಸುರಕ್ಷತೆ/ ನೆರವು ಒದಗಿಸಲಾಗಿದೆ; (ವರ್ಷವಾರು ಮಾಹಿತಿ ನೀಡುವುದು)

(ಇ) ಮಕ್ಕಳನ್ನು ರಕ್ಷಿಸಿದ ನಂತರ ಆಪ್ತ ಸಮಾಲೋಚನೆ ಸೇರಿದಂತೆ ಅವರಿಗೆ ಯಾವ ರೀತಿಯ ನೆರವು ಒದಗಿಸಲಾಗುತ್ತದೆ; (ವಿವರ ನೀಡುವುದು)

(ಈ) ಕಳೆದ ೫ ವರ್ಷಗಳಲ್ಲಿ ರಾಜ್ಯದ ರೈಲ್ವೆ ಮಾರ್ಗಗಳಲ್ಲಿ ರೈಲಿಗೆ ಸಿಲುಕಿ ಮೃತಪಟ್ಟ ಜನ-ಜಾನುವಾರುಗಳ ಸಂಖ್ಯೆ ಎಷ್ಟು? (ವರ್ಷವಾರು ಮಾಹಿತಿ ನೀಡುವುದು)

## ಮೂಲ ಸೌಲಭ್ಯ ಅಭಿವೃದ್ಧಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೪೭ (೫೭೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲ ಸೌಕರ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕದ ವೈಮಾನಿಕ, ರೈಲು ಮತ್ತು ಕಡಲ ಸಂಪರ್ಕವನ್ನು ಅಭಿವೃದ್ಧಿಪಡಿಸುವ ವಲಯಗಳಲ್ಲಿ ಮೂಲಸೌಲಭ್ಯದಲ್ಲಿ ಹೆಚ್ಚಿನ ಖಾಸಗಿ ಕ್ಷೇತ್ರದ ಪಾಲ್ಗೊಳ್ಳುವಿಕೆ ಕುರಿತು ಇಲಾಖೆಯ ಮೂಲ

ಉದ್ದೇಶದಂತೆ ಎಷ್ಟು ಯೋಜನೆಗಳಲ್ಲಿ ಯಾವ ಯಾವ ಖಾಸಗಿ ಸಂಸ್ಥೆಗಳ ಪಾಲುದಾರಿಕೆಯನ್ನು ಉತ್ತೇಜಿಸಿದೆ ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಮೂಲಸೌಲಭ್ಯ ಅಭಿವೃದ್ಧಿ ವಲಯದಲ್ಲಿ ಇಲಾಖೆ ಹೂಡಿದ ಬಂಡವಾಳವೆಷ್ಟು ; ವೈಮಾನಿಕ, ರೈಲು ಮತ್ತು ಕಡಲ ಸಂಪರ್ಕವನ್ನು ಅಭಿವೃದ್ಧಿಪಡಿಸುವ ವಲಯಗಳಲ್ಲಿ ಹೂಡಿದ ಬಂಡವಾಳವೆಷ್ಟು ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ವೈಮಾನಿಕ, ರೈಲು ಮತ್ತು ಕಡಲ ಸಂಪರ್ಕವನ್ನು ಅಭಿವೃದ್ಧಿ ಪಡಿಸಲು ಖಾಸಗಿ ಕ್ಷೇತ್ರದ ಪಾಲ್ಗೊಳ್ಳುವಿಕೆಯೊಂದಿಗೆ ಯಾವ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ; (ವಿವರ ನೀಡುವುದು)

(ಈ) ಈ ನಿಟ್ಟಿನಲ್ಲಿ ರಾಜ್ಯ ಮತ್ತು ಕೇಂದ್ರದ ಇಲಾಖೆಗಳ ನಡುವೆ ಸಮನ್ವಯ ಸಾಧಿಸಲು ಇಲಾಖೆ ಈವರೆಗೆ ಯಾವ ಕ್ರಮವಹಿಸಿದೆ ; ಎಷ್ಟು ಪ್ರಸ್ತಾವನೆಗಳನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ ಮತ್ತು ಎಷ್ಟು ಪ್ರಸ್ತಾವನೆಗಳು ಕಾರ್ಯರೂಪಕ್ಕೆ ಬಂದಿವೆ ;

(ಉ) ಕರ್ನಾಟಕ ರೈಲ್ವೆ ಇನ್ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಕಾರ್ಪೊರೇಷನ್ (ಕೆ-ರೈಡ್) ಮೂಲಕ ರೈಲ್ವೆ ಸಚಿವಾಲಯದ ಪಾಲುದಾರಿಕೆಯೊಂದಿಗೆ ಕರಾವಳಿ ಭಾಗದ ಜನವಸತಿ ಪ್ರದೇಶದಲ್ಲಿ ಅತೀ ಅಗತ್ಯವಿರುವ ರೈಲ್ವೆ ಲೆವೆಲ್ ಕ್ರಾಸಿಂಗ್, ಮೇಲ್ಸೇತುವೆ, ಕೆಳಸೇತುವೆ, ಸರಕು ಶೆಡ್, ರೈಲ್ವೆ ನಿಲ್ದಾಣಗಳ ಅಭಿವೃದ್ಧಿಗೆ ಕ್ರಮವಹಿಸದಿರಲು ಕಾರಣಗಳೇನು ; ಈ ಕುರಿತಂತೆ ಕ್ರಮ ವಹಿಸಲಾಗುವುದು ಯಾವಾಗ ?

# ಕರ್ನಾಟಕ ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿನ ಮಾರುಕಟ್ಟೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೪೪ (೫೭೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಇರುವ ಒಟ್ಟು ಮಾರುಕಟ್ಟೆ ಮತ್ತು ವಾಣಿಜ್ಯ ಸಂಕೀರ್ಣಗಳೆಷ್ಟು; ಅವುಗಳನ್ನು ನಿಗಧಿತವಾಗಿ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಅದರಿಂದ ಬರುತ್ತಿರುವ ಆದಾಯವೆಷ್ಟು;

(ಆ) ಮಂಗಳೂರು ಮಹಾನಗರ ಪಾಲಿಕೆಯ ಅಧೀನದಲ್ಲಿರುವ ವಾಣಿಜ್ಯ ಸಂಕೀರ್ಣಗಳು, ಮಾರುಕಟ್ಟೆ, ಹಾಗೂ ಇತರ ಕಟ್ಟಡಗಳು ಎಷ್ಟು; ಪ್ರಸ್ತುತ ಇರುವ, ನಿರ್ಮಾಣವಾಗುತ್ತಿರುವ ಕಟ್ಟಡಗಳ ಸಹಿತ ಎಲ್ಲಾ ವಿವರ ನೀಡುವುದು ;

(ಇ) ಈ ರೀತಿ ನಿರ್ಮಿಸಿದ ಕಟ್ಟಡಗಳು ಭೌತಿಕವಾಗಿ ಯಾವಾಗ ಪೂರ್ಣಗೊಂಡಿವೆ ; ಉದ್ಘಾಟನೆಯಾಗದ ಕಟ್ಟಡಗಳೆಷ್ಟು ; ಹಾಗೂ ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡದ ಕಟ್ಟಡಗಳೆಷ್ಟು; ಇದಕ್ಕೆ ಕಾರಣಗಳೇನು ; ಕಟ್ಟಡ ಬಳಕೆಗೆ ತಡವಾಗುವಿಕೆ ಸದರಿ ಕಟ್ಟಡಕ್ಕೆ ಪಡೆದ ಸಾಲ ಇತ್ಯಾದಿ ಮರುಪಾವತಿ ತಡವಾಗಿ ಪಾಲಿಕೆಗೆ ಹೆಚ್ಚುವರಿ ಹೊರೆಯಾಗುವುದಿಲ್ಲವೇ ; (ವಿವರ ನೀಡುವುದು)

(ಈ) ಹೊಸ ಕಟ್ಟಡಗಳನ್ನು ಕಟ್ಟಿದ್ದರೂ ಬಿಡ್ಡುದಾರರು ಭಾಗವಹಿಸದಿರಲು ಕಾರಣಗಳೇನು ; ಕಟ್ಟಡ ಬಾಡಿಗೆ ಮತ್ತು ಲೀಸ್ ನಿಯಮಗಳನ್ನು ಬಿಡ್ಡುದಾರರ ಹಿತಾಸಕ್ತಿಗೆ ಅನುಗುಣವಾಗಿ ಹಾಗೂ ಪಾಲಿಕೆ ಆದಾಯಕ್ಕೆ ಕೊರತೆ ಬಾರದ ರೀತಿಯಲ್ಲಿ ಮಾರ್ಪಡಿಸಲು ಇಲಾಖೆ ಏನು ಕ್ರಮವಹಿಸಿದೆ ;

(ಉ) ಹೊಸ ಮಾರುಕಟ್ಟೆ ಕಟ್ಟಡಗಳನ್ನು ಖಾಲಿ ಉಳಿದು ಕಟ್ಟಡ ನಿರ್ವಹಣೆಯ ಕೊರತೆಯಿಂದ ಹಾಳಾಗುವ ಸಮಸ್ಯೆಯನ್ನು ಪರಿಹರಿಸಲು ಇಲಾಖೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳುತ್ತದೆ ?

## ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಗಣಿಗಾರಿಕೆ ನಿಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೪೯ (೫೭೨) ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗ್ರಾನೈಟ್, ಮಾರ್ಬಲ್, ಕಪ್ಪುಕಲ್ಲು, ಮರಳು, ಕೆಂಪು ಕಲ್ಲು ಮತ್ತು ಇತರ ಗಣಿಗಾರಿಕೆ ಉತ್ಪನ್ನಗಳನ್ನು ಹಾಗೂ ಮಣ್ಣು ತೆಗೆಯಲು ಕಾರಣಗಳೇನು ; ನಿಯಮಗಳೇನು ; ಗಣಿಗಾರಿಕೆ ಉತ್ಪನ್ನಗಳ ಸಾಗಾಟ, ಮಾರಾಟದ ಮತ್ತು ರಾಜಧನ ಕುರಿತಂತೆ ನಿಯಂತ್ರಣ ಪ್ರಾಧಿಕಾರಗಳು ಯಾವುವು ;

(ಆ) ರಸ್ತೆ, ಕಾಲುವೆ, ವಿಮಾನ ನಿಲ್ದಾಣ, ಹಾಗೂ ಇನ್ನಿತರ ಸಾರ್ವಜನಿಕ ಕಾಮಗಾರಿಗಳನ್ನು ನಡೆಸುವಾಗ ಲಭ್ಯವಾಗುವ ಕಲ್ಲು-ಮಣ್ಣು ಸಹಿತ ಇನ್ನಿತರ ಖನಿಜ ಇತ್ಯಾದಿಗಳನ್ನು ತೆಗೆಯಲು ಮತ್ತು ಅಲ್ಲಿಯ ಕಾಮಗಾರಿಗೆ ಅಗತ್ಯವಿಲ್ಲದ ಉತ್ಪನ್ನಗಳನ್ನು ಸಾಗಿಸಿ ಮಾರಾಟ ಮಾಡಲು ಅವಕಾಶವಿದೆಯೇ ;

(ಇ) ರಸ್ತೆ ಮತ್ತು ಹೆದ್ದಾರಿ ನಿರ್ಮಾಣ ಕಾಮಗಾರಿಯ ಪ್ರಾಧಿಕಾರದ ಹೆಸರನ್ನು ಸಾಗಾಟ ವಾಹನಗಳಿಗೆ ಅಂಟಿಸಿ ಈ ಮೂಲಕ ಗಣಿ ಉತ್ಪನ್ನಗಳನ್ನು ಸಾಗಾಟ ಮಾಡುತ್ತಿರುವ/ಮಾರುತ್ತಿರುವ ಬಗ್ಗೆ ಇಲಾಖೆ ಯಾವ ರೀತಿಯಲ್ಲಿ ಕ್ರಮ ವಹಿಸಿದೆ ;

(ಈ) ಹೆದ್ದಾರಿ ನಿರ್ಮಾಣ ಸಂದರ್ಭದಲ್ಲಿ ಲಭ್ಯವಾಗುವ ಕೆಂಪು ಕಲ್ಲು ಮಾರಾಟ ಮಾಡಲು ನಿರ್ಬಂಧಿಸಿದೆಯೇ; ನಿರ್ಬಂಧಗಳನ್ನು ಜಾರಿಗೊಳಿಸುವ ಪ್ರಾಧಿಕಾರ ಯಾವುದು; ರಸ್ತೆ ಕಾಮಗಾರಿಯ ಸಂದರ್ಭದಲ್ಲಿ ಗಣಿಗಾರಿಕೆಯ ಮೂಲಕ ತೆಗೆದ ಕೆಂಪು ಕಲ್ಲನ್ನು ರಸ್ತೆ ಮತ್ತು ಹೆದ್ದಾರಿ ನಿರ್ಮಾಣ ಕಾಮಗಾರಿಗೆ ಬಳಸಲಾಗುತ್ತಿದೆಯೇ; ಇಲ್ಲದಿದ್ದಲ್ಲಿ, ಅದನ್ನು ಏನು ಮಾಡಲಾಗುತ್ತಿದೆ;

(ಉ) ರಸ್ತೆಗಳ ರಚನೆ, ವಿನ್ಯಾಸ ಮತ್ತು ಸುರಕ್ಷತೆ ರಸ್ತೆ ನಿರ್ಮಾಣ ಪ್ರಾಧಿಕಾರದ್ದಾಗಿದ್ದರೂ ಸದರಿ ಕಾಮಗಾರಿಗಳಿಗೆ ಗುಡ್ಡ ಅಗೆದು ಮಣ್ಣು ಸಾಗಿಸುವಾಗ ಕರಾವಳಿಯ ಎತ್ತರ ಪ್ರದೇಶದಲ್ಲಿ ೯೦ ಡಿಗ್ರಿಯ ಕಡಿದಾದ ಪ್ರಪಾತ ನಿರ್ಮಿಸಲ್ಪಡುವುದನ್ನು ತಡೆಯುವ ಬಗ್ಗೆ ಇಲಾಖೆಯಿಂದ ಏನು ಕ್ರಮ ವಹಿಸಲಾಗುತ್ತಿದೆ; ಈ ಕುರಿತು ಆಯಾಯ ಪ್ರಾಧಿಕಾರದೊಂದಿಗೆ ಸಂವಹನ ಮಾಡಲಾಗಿದೆಯೇ ?

## ಪೌರಾಡಳಿತ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರು, ಕಸ ನಿರ್ವಹಣೆ ಮತ್ತು ಒಳಚರಂಡಿ ಯೋಜನೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೫೦ (೫೭೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪೌರಾಡಳಿತಗಳ ಆಧೀನದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರು, ಕಸ ನಿರ್ವಹಣೆ ಮತ್ತು ಒಳಚರಂಡಿ ಯೋಜನೆಗಳನ್ನು ಹೇಗೆ ನಿರ್ವಹಿಸಲಾಗುತ್ತಿದೆ; (ವಿವರ ನೀಡುವುದು)

(ಆ) ರಾಜ್ಯದ ಎಷ್ಟು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ (೨೪x೭) ದಿನ ಪೂರ್ತಿ ಕುಡಿಯುವ ನೀರಿನ ಸಂಪರ್ಕ ಒದಗಿಸಲಾಗಿದೆ ; ಇನ್ನು ಎಷ್ಟು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಂಪರ್ಕ ಒದಗಿಸಲು ಬಾಕಿಯಿದೆ ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಪೌರಾಡಳಿತಗಳ ಆಧೀನದ ಎಷ್ಟು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪೂರ್ಣ ಪ್ರಮಾಣದ ಒಳಚರಂಡಿ ವ್ಯವಸ್ಥೆಯಿದೆ ; ಇನ್ನು ಎಷ್ಟು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆಯನ್ನು ಒದಗಿಸಬೇಕಾಗಿದೆ ; ಯಾವಾಗ ಒದಗಿಸಲು ಕ್ರಮವಹಿಸಲಾಗುತ್ತಿದೆ ;

(ಈ) ಕರಾವಳಿ ಜಿಲ್ಲೆಗಳಲ್ಲಿ ಹೆಚ್ಚು ಮಳೆ ಬರುವುದರಿಂದ ಮತ್ತು ಪೂರ್ಣ ಪ್ರಮಾಣದ ಒಳಚರಂಡಿ ವ್ಯವಸ್ಥೆಯಿರದ ಕಾರಣ ಮಳೆಗಾಲದಲ್ಲಿ ಕೊಳಚೆ ನೀರು ಮನೆಗಳಿಗೆ ನುಗ್ಗುತ್ತಿದ್ದು ಈ ಬಗ್ಗೆ ಇಲಾಖೆ ಯಾವ ರೀತಿಯ ಕ್ರಮ ವಹಿಸುತ್ತಿದೆ ;

(ಉ) ಕರಾವಳಿ ಜಿಲ್ಲೆಗಳಲ್ಲಿ ಕಸ ನಿರ್ವಹಣೆಯನ್ನು ಯಾವ ರೀತಿಯಲ್ಲಿ ಮಾಡಲಾಗುತ್ತಿದೆ ; ನಿರ್ವಹಣೆಯನ್ನು ಹೊರಗುತ್ತಿಗೆ ನೀಡಲಾಗಿದೆಯೇ ; ಜಿಲ್ಲಾವಾರು ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳನ್ನು ಸೇರಿಸಿ ಒಂದು ಏಕ ರೀತಿಯ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಿ ಕಸ ನಿರ್ವಹಣೆಯನ್ನು ಮಾಡುವ ಕುರಿತ ಯಾವುದಾದರೂ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಸಾರ್ವಜನಿಕ ಉದ್ಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೧ (೫೭೪) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ಯಮಗಳು (ಪಿಎಸ್‌ಯು) ಯಾವುವು : ಈ ಸಾರ್ವಜನಿಕ ಉದ್ಯಮಗಳಲ್ಲಿ ಲಾಭದಲ್ಲಿ ಮುಂದುವರಿಯುತ್ತಿರುವ ಉದ್ಯಮಗಳ ಸಂಖ್ಯೆಯೆಷ್ಟು; ನಷ್ಟದಲ್ಲಿರುವ ಉದ್ಯಮಗಳ ಸಂಖ್ಯೆಯೆಷ್ಟು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇರುವ ಸಾರ್ವಜನಿಕ ಉದ್ಯಮಗಳು ಯಾವುವು ;

(ಇ) ನಷ್ಟದ ಹಾದಿಯಲ್ಲಿರುವ ಸಾರ್ವಜನಿಕ ಉದ್ಯಮಗಳನ್ನು ಇತರ ಲಾಭದಲ್ಲಿ ಮುಂದುವರಿಯುತ್ತಿರುವ ಉದ್ಯಮಗಳ ಜೊತೆ ವಿಲೀನಗೊಳಿಸಲಾಗಿದೆಯೇ ; ಇದರಿಂದ ಉದ್ಯಮ ವಲಯಕ್ಕೆ ಲಾಭವಾಗಿದೆಯೇ ; (ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ನಷ್ಟದಲ್ಲಿರುವ ಉದ್ಯಮಗಳಲ್ಲಿ ಪುನಃಶ್ಚೇತನ ಯೋಜನೆಗಳು ವಿಫಲವಾಗಿ ಪೂರ್ಣಕಾಲಿಕವಾಗಿ ಮುಚ್ಚಿರುವ ಉದ್ಯಮಗಳು ಯಾವುವು ; ಅವುಗಳಲ್ಲಿ ಕಾರ್ಯ ನಿರ್ವಹಿಸುತ್ತಿದದ್ದನ್ನು ಸಿಬ್ಬಂದಿಗಳಿಗೆ ಪುನರ್ವಸತಿ ಯೋಜನೆಯನ್ನು ಜಾರಿಗೊಳಿಸಿದೆಯೇ : (ವಿವರ ನೀಡುವುದು)

(ಉ) ನಷ್ಟದಲ್ಲಿರುವ ಉದ್ಯಮಗಳಿಗೆ ಪುನಃಶ್ಚೇತನ ಸರ್ಕಾರದಿಂದ ಎಷ್ಟು ಮೊತ್ತವನ್ನು ನೀಡಲಾಗಿದೆ ; ಈ ಅನುದಾನ ನೀಡಿದ ನಂತರ ಸದರಿ ಉದ್ಯಮಗಳು ಸುಧಾರಿಸಿವೆಯೇ ; (ವಿವರ ನೀಡುವುದು)

(ಊ) ಬದಲಾಗುತ್ತಿರುವ ಮಾರುಕಟ್ಟೆ ಪರಿಸ್ಥಿತಿಗಳಿಗೆ ಪೂರಕವಾಗಿ ಸಾರ್ವಜನಿಕ ಉದ್ಯಮಗಳು ಸ್ವಯಂ ಆಗಿ ಅಭಿವೃದ್ಧಿ ಹೊಂದಲು ಯಾವ ರೀತಿಯ ಅಗತ್ಯ ಕ್ರಮಗಳನ್ನು ಇಲಾಖೆಯ ಮೂಲಕ ತೆಗೆದುಕೊಳ್ಳಲಾಗುವುದು ?

## ರಾಜ್ಯದಲ್ಲಿ ಪುಷ್ಪೋದ್ಯಮಕ್ಕೆ ಉತ್ತೇಜನ ಕುರಿತು

**ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೫೨ (೬೦೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪುಷ್ಪೋದ್ಯಮ ಉತ್ತೇಜಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಹೂವುಗಳ ರಫ್ತಿಗಾಗಿ ಹೊಸ ಮಾರುಕಟ್ಟೆ ನಿರ್ಮಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಯಾವ ಭಾಗದಲ್ಲಿ ಈ ಮಾರುಕಟ್ಟೆಗಳನ್ನು ನಿರ್ಮಿಸುವ ಉದ್ದೇಶವಿದೆ ;

(ಇ) ರಾಜ್ಯದಲ್ಲಿ ಒಟ್ಟು ಪುಷ್ಪ ಬೆಳೆಯುವ ಪ್ರದೇಶವೆಷ್ಟು ; ಕಳೆದ ಹತ್ತು ವರ್ಷಗಳ ಪುಷ್ಪೋದ್ಯಮ ಬೆಳವಣಿಗೆ ಬಗ್ಗೆ ಅಂಕಿ ಸಮೇತ ವರ್ಷವಾರು ಮಾಹಿತಿ ಒದಗಿಸುವುದು ?

## ರಾಜ್ಯದಲ್ಲಿ ಉಗ್ರಾಣಗಳ ನಿರ್ವಹಣೆ

**ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೫೩ (೬೦೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ಒಟ್ಟು ಉಗ್ರಾಣಗಳ ಸಂಖ್ಯೆ ಎಷ್ಟು;

(ಆ) ಈ ಉಗ್ರಾಣಗಳನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆಯೇ ; ಇವುಗಳ ಸಂಗ್ರಹಣಾ ಸಾಮರ್ಥ್ಯವನ್ನು ಹೆಚ್ಚಿಸಲು ಕೈಗೊಂಡ ಕ್ರಮಗಳೇನು ;

(ಇ) ಹೊಸ ಉಗ್ರಾಣಗಳ ಸ್ಥಾಪನೆಗಾಗಿ ಎಷ್ಟು ಸ್ಥಳಗಳಿಂದ ಬೇಡಿಕೆಗಳು ಬಂದಿವೆ ; ಬೇಡಿಕೆಗಳ ಈಡೇರಿಕೆಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ಹಾಗೂ ಅಗತ್ಯವಿರುವ ಅನುದಾನವನ್ನು ಮುಂದಿನ ಆಯವ್ಯಯದಲ್ಲಿ ಒದಗಿಸಲಾಗುವುದೇ ?

## ಇಲಾಖೆ ವತಿಯಿಂದ ಸ್ಥಾಪಿಸಲಾಗಿರುವ ಕೈಗಾರಿಕೆ ಪ್ರದೇಶಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೫೪ (೫೮೭) ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವ್ಯಾಪ್ತಿಯ ಕೆ.ಐ.ಎ.ಡಿ.ಬಿ ವತಿಯಿಂದ ಎಷ್ಟು ಕೈಗಾರಿಕಾ ಪ್ರದೇಶಗಳನ್ನು ಸ್ಥಾಪಿಸಲಾಗಿದೆ ;

(ಆ) ಸದರಿ ಕೈಗಾರಿಕಾ ಪ್ರದೇಶಗಳು ಎಷ್ಟು ವಿಸ್ತೀರ್ಣ ಇಲಾಖೆಯ ಸುಪರ್ದಿಯಲ್ಲಿದೆ ಮತ್ತು ಸುಪರ್ದಿಯಲ್ಲಿರುವ ಜಾಗಗಳಲ್ಲಿ ಕೈಗಾರಿಕಾ ಪ್ರದೇಶಗಳನ್ನು ಸಂಪೂರ್ಣವಾಗಿ ಸ್ಥಾಪಿಸಲಾಗಿದೆಯೇ ; ಇಲ್ಲವಾದಲ್ಲಿ, ಬೇರೆ ಯಾವ ಉದ್ದೇಶಕ್ಕೆ ಈ ಜಾಗವನ್ನು ಉಪಯೋಗಿಸಲಾಗಿದೆ ;

(ಇ) ರಾಜ್ಯದ ಎಲ್ಲಾ ಜಿಲ್ಲೆಗಳ ಕೈಗಾರಿಕಾ ಪ್ರದೇಶಗಳಲ್ಲಿ ಯಾವ ಯಾವ ವರ್ಗಗಳ ಜನರಿಗೆ ಸದರಿ ಜಾಗವನ್ನು ಹಂಚಿಕೆ ಮಾಡಲಾಗಿದೆ ; ಅದರಲ್ಲಿ ಮಹಿಳೆಯರಿಗೆ ಸಣ್ಣ ಕೈಗಾರಿಕಾ ಸಂಸ್ಥೆಗಳಿಗೆ ಎಸ್.ಸಿ/ ಎಸ್.ಟಿ. ಇನ್ನಿತರೆ ವರ್ಗದವರಿಗೆ ಹಂಚಿಕೆ ಮಾಡಲಾಗಿದೆ ;

(ಈ) ಹಲವು ವರ್ಷಗಳಿಂದ ಹಂಚಿಕೆ ಮಾಡಲಾದ ಕೈಗಾರಿಕಾ ನಿವೇಶನಗಳ ಮೂಲ ಮಾಲೀಕರು ಈ ಜಾಗದಲ್ಲಿ ಕೈಗಾರಿಕಾ ಸ್ಥಾಪನೆ ಮಾಡಿದ್ದಾರೆಯೇ ಅಥವಾ ಸದರಿ ಜಾಗವನ್ನು ಇನ್ನಿತರೇ ಮಾಲೀಕರಿಗೆ ಬಾಡಿಗೆ, ಗುತ್ತಿಗೆ ರೂಪದಲ್ಲಿ ನೀಡಿ ಅಕ್ರಮ ವೆಸಗಿದ್ದಾರೆಯೇ ; ಅಕ್ರಮ ವೆಸಗಿದ್ದಲ್ಲಿ, ಇವರ ವಿರುದ್ಧ ಏನು ಕ್ರಮಕೈಗೊಳ್ಳಲಾಗಿದೆ ;

(ಉ) ಹಲವು ವರ್ಷಗಳಿಂದ ಕೈಗಾರಿಕಾ ಪ್ರದೇಶವನ್ನು ಸ್ಥಾಪಿಸುವ ಸಮಯದಲ್ಲಿ ಭೂಸ್ವಾಧೀನ ಪಡಿಸಿಕೊಳ್ಳುವ ರೈತರ ಜಮೀನಿಗೆ ಎಷ್ಟು ಬೆಲೆಯನ್ನು ನಿಗಧಿಪಡಿಸಿ ಪರಿಹಾರ ರೂಪದಲ್ಲಿ ನೀಡಲಾಗುತ್ತಿದೆ ಹಾಗೂ ಭೂಸ್ವಾಧೀನಪಡಿಸಿಕೊಂಡಿರುವ ಜಮೀನನ್ನು ಕೈಗಾರಿಕೆಗಳಿಗೆ ಯಾವ ಬೆಲೆಯಲ್ಲಿ ನೀಡಲಾಗುತ್ತಿದೆ ; ಪ್ರತಿ ವರ್ಷ ಸದರಿ ನಿವೇಶನಗಳಿಗೆ ಬೆಲೆ ಪರಿಷ್ಕರಣೆ ಮಾಡಲಾಗುತ್ತಿದೆಯೇ ; ಮಾಡಿದ್ದಲ್ಲಿ, ಎಷ್ಟು ಬೆಲೆ ಪರಿಷ್ಕರಣೆ ಮಾಡಲಾಗಿದೆ ಮತ್ತು ಅದಕ್ಕೆ ಕಾರಣಗಳೇನು ?

## ಸ್ಥಳೀಯರು ಸ್ಥಳೀಯವಾಗಿ ಮರಳನ್ನು ಪಡೆಯಲು ಇರುವ ಕಾನೂನುಗಳ ಬಗ್ಗೆ

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೫ (೫೧೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಅಂದಾಜು ಎಷ್ಟು ಮೆಟ್ರಿಕ್‌ಟನ್ ಪ್ರಮಾಣದ ಮರಳಿನ ಬೇಡಿಕೆ ಮತ್ತು ಕೊರತೆ ಇದೆ ; ಹೊರ ರಾಜ್ಯಗಳಿಂದ ಎಷ್ಟು ಪ್ರಮಾಣದ ಮರಳು ಪೂರೈಕೆ ಆಗುತ್ತಿದೆ ; (ಎಂ–ಸ್ಯಾಂಡ್ ಮತ್ತು ನದಿ ಮೂಲದ ವಿವರ ನೀಡುವುದು)

(ಆ) ನಿರ್ಮಾಣ ಕಾಮಗಾರಿಗಳಿಗೆ ಗ್ರಾಹಕರಿಗೆ ಕೈಗೆಟಕುವ ದರದಲ್ಲಿ ನಿಯಮಿತವಾಗಿ, ಪಾರದರ್ಶಕವಾಗಿ ಮರಳು ದೊರಕುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು : (ವಿವರ ನೀಡುವುದು)

(ಇ) ನಿರ್ಮಾಣ ಕಾಮಗಾರಿಗೆ ಸ್ಥಳೀಯವಾಗಿ ದೊರೆಯುವ ಮರಳನ್ನು ಎತ್ತಿನಗಾಡಿ, ಟ್ರ್ಯಾಕ್ಟರ್ ಇತ್ಯಾದಿ ಲಘು ವಾಹನಗಳ ಮೂಲಕ ಮರಳು ಸಾಗಾಣಿಕೆ ಮಾಡಲು ಸ್ಥಳೀಯವಾಗಿ ಅನುಮತಿ ಪಡೆಯಬೇಕೆ ; ಹಾಗಿದ್ದಲ್ಲಿ, ಯಾರಿಂದ ಅನುಮತಿ ಪಡೆಯಬೇಕು ; ಅನುಮತಿ ಇಲ್ಲದೆ ಮರಳು ಸಾಗಾಣಿಕೆ ಮಾಡುವವರ ವಿರುದ್ಧ ಕ್ರಮ ವಹಿಸುವವರು ಯಾರು ?

## ಕರ್ನಾಟಕ ರಾಜ್ಯ ಸರ್ಕಾರದ ಜವಳಿ ನೀತಿ ಕುರಿತು

**ಶ್ರೀ ಎಂ. ನಾಗರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೬ (೫೮೮) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವತಿಯಿಂದ ಕರ್ನಾಟಕದಲ್ಲಿ ಕ್ರಿಯಾತ್ಮಕ ಮತ್ತು ಬೆಳವಣಿಗೆ ಆಧಾರಿತ ಜವಳಿ ವಲಯವನ್ನು ಬಲಪಡಿಸಲು ಮತ್ತು ಅಭಿವೃದ್ಧಿಪಡಿಸಲು ಈ ಹಿಂದೆ "ಸುವರ್ಣ ವಸ್ತ್ರ ನೀತಿ" ಜಾರಿಗೊಳಿಸಿದ್ದು ಈ ನೀತಿಯು ೨೦೨೪–೨೫ನೇ ಸಾಲಿನಲ್ಲೂ ಅಸ್ತಿತ್ವದಲ್ಲಿದೆಯೇ ;

(ಆ) ಸರ್ಕಾರದ ವತಿಯಿಂದ ಈ ಹಿಂದೆ ಮೈಸೂರು, ಹಾಸನ, ತುಮಕೂರು, ಕೋಲಾರ, ಚಿತ್ರದುರ್ಗ, ಮಂಡ್ಯ, ಬಳ್ಳಾರಿ, ಚಿಕ್ಕಬಳ್ಳಾಪುರ, ಹುಬ್ಬಳ್ಳಿ–ಧಾರವಾಡ, ಬೆಳಗಾವಿ, ಬಾಗಲಕೋಟೆ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಜವಳಿ ಘಟಕಗಳನ್ನು ಸ್ಥಾಪಿಸಲು ಉದ್ದೇಶಿಸಿದ್ದು ನಿಜವೇ ;

(ಇ) ಇದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಜವಳಿ ಘಟಕಗಳನ್ನು ಸ್ಥಾಪಿಸಲಾಗಿದೆ ಮತ್ತು ಇದರಿಂದ ಎಷ್ಟು ಉದ್ಯೋಗಗಳು ಸೃಷ್ಟಿಯಾಗಿವೆ ;

(ಈ) ಇಲ್ಲವಾದಲ್ಲಿ, ಪ್ರಸ್ತಾಪಿತ ಜಿಲ್ಲೆಗಳಲ್ಲಿ ಜವಳಿ ಘಟಕಗಳನ್ನು ಸ್ಥಾಪಿಸಲು ಉಂಟಾಗುತ್ತಿರುವ ತೊಂದರೆಗಳೇನು ? (ಮಾಹಿತಿ ನೀಡುವುದು)

## ಪೀಣ್ಯ ಕೈಗಾರಿಕಾ ಪ್ರದೇಶಗಳಲ್ಲಿನ ಸಮಸ್ಯೆಗಳ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೭ (೫೬೯) ಮಾನ್ಯ ಸಣ್ಣ ಕೈಗಾರಿಗೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಮೂಲಭೂತ ಸೌಲಭ್ಯಗಳಿಲ್ಲದೆ ಕೈಗಾರಿಕೆಗಳ ದೈನಂದಿನ ಕಾರ್ಯಾಚರಣೆಗೆ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಪ್ರದೇಶದಲ್ಲಿ ಫುಟ್‌ಪಾತ್ ಗಳ ನಿರ್ಮಾಣ ಮಾಡಲಾಗಿದೆಯೇ ಮತ್ತು ಸಾರ್ವಜನಿಕರ ಉಪಯೋಗಕ್ಕಾಗಿ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಿಸಲಾಗಿದೆಯೇ ; ನಿರ್ಮಿಸಿದ್ದಲ್ಲಿ ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ ; ಬೀದಿ ದೀಪಗಳನ್ನು ಅಳವಡಿಸಲಾಗಿದೆಯೇ ;

(ಆ) ರಾಜ್ಯ ಸರ್ಕಾರವು ೨೦೧೩ನೇ ಸಾಲಿನಲ್ಲಿ ಎಲೆಕ್ಟ್ರಾನಿಕ್ ಸಿಟಿ ಕೈಗಾರಿಕಾ ಪ್ರದೇಶಕ್ಕೆ 'ELCITA' ಎಂಬ ಪ್ರಾಧಿಕಾರ ಸ್ಥಾಪಿಸಿದಂತೆ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ "ಕೈಗಾರಿಕಾ ಟೌನ್‌ಶಿಪ್ ಪ್ರಾಧಿಕಾರ' ರಚಿಸಲಾಗುವುದು ಎಂದು ಪ್ರತಿ ಬಾರಿ ಸದನದಲ್ಲಿ ಸರ್ಕಾರವು ಭರವಸೆ ನೀಡುತ್ತಾ ಬಂದಿದ್ದು, ಇಲ್ಲಿಯವರೆಗೆ ಈ ಪ್ರದೇಶದಲ್ಲಿ ಪ್ರಾಧಿಕಾರ ರಚಿಸಲು ಉಂಟಾಗುತ್ತಿರುವ ಅಡಚಣೆಗಳೇನು ;

(ಇ) ಈ ಪ್ರದೇಶವು ಸುಮಾರು ೪೦ ಚದರ ಕಿ.ಮೀ ವಿಸ್ತೀರ್ಣವನ್ನು ಹೊಂದಿದ್ದು, ಇಲ್ಲಿ ಹಲವಾರು ಬೃಹತ್, ಮಧ್ಯಮ ಹಾಗೂ ಸಣ್ಣ ಪ್ರಮಾಣದ ಕೈಗಾರಿಕೆಗಳಿಗೆ ನೆಲೆಯಾಗಿರುತ್ತದೆ. ಆದರೆ ಸದರಿ ಪ್ರದೇಶದಲ್ಲಿ ಹೆಚ್ಚಾಗುತ್ತಿರುವ ತಾಪಮಾನದಿಂದ ಆರೋಗ್ಯ ಸಮಸ್ಯೆಗಳನ್ನು ಉಲ್ಬಣಗೊಳಿಸುತ್ತಿದ್ದು, ಉತ್ಪಾದಕತೆಯನ್ನು ಕಡಿಮೆ ಮಾಡುತ್ತಿರುವುದು ನಿಜವೇ ; ಇದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಬಹುತೇಕ ಕೈಗಾರಿಕೆಗಳು ಇಟಿಪಿ ಇಲ್ಲದೇ ತ್ಯಾಜ್ಯವನ್ನು ನೇರವಾಗಿ ಕೆರೆಗಳಲ್ಲಿ ಹಾಕುತ್ತಿದ್ದು, ಇದರಿಂದ ಪೀಣ್ಯ ಕೈಗಾರಿಕಾ ಪ್ರದೇಶದ ಸುತ್ತಮುತ್ತಲಿನ ಕೆರೆಗಳಾದ ಗಂಗಗೊಂಡನಹಳ್ಳಿ ಕೆರೆ, ದಾಸರಹಳ್ಳಿ ಕೆರೆ, ಕಲ್ಕೆರೆ ಕೆರೆ, ನಾಗಸಂದ್ರ ಕೆರೆ, ಶೆಟ್ಟಿಹಳ್ಳಿ ಕೆರೆಗಳು ಸಂಪೂರ್ಣವಾಗಿ ಕಲುಷಿತವಾಗಿದ್ದು, ಇಂತಹ ಕೈಗಾರಿಕೆಗಳ ವಿರುದ್ಧ ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಮರಳು ಗಣಿಗಾರಿಕೆ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೮ (೫೯೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಶೀಲಿಸಲು ಮತ್ತು ಮೇಲ್ವಿಚಾರಣೆ ಕುರಿತು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಆ) ಇದ್ದಲ್ಲಿ, ವಿಶೇಷವಾಗಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮರಳು ಮಾಫಿಯಾ ತಡೆಗಟ್ಟಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ವಿವರಗಳನ್ನು ನೀಡುವುದು)

(ಇ) ೨೦೧೯ ರಿಂದ ೨೦೨೩ನೇ ಸಾಲಿನವರೆಗೆ ರಾಜ್ಯದಲ್ಲಿ ಎಷ್ಟು ಮೆಟ್ರಿಕ್ ಟನ್ ಮರಳು ಮಾಫಿಯಾ ಕುರಿತು ವರದಿಯಾಗಿದೆ ; ಮತ್ತು ಇದರ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ಅಕ್ರಮ ಮರಳು ಗಣಿಗಾರಿಕೆ ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಏನು ? (ಮಾಹಿತಿ ನೀಡುವುದು)

## ಬೆಳಗಾವಿಯಲ್ಲಿ ಸ್ಮಾರ್ಟ್ ಸಿಟಿ ಯೋಜನೆ ಅನುಷ್ಠಾನ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೫ (೫೯೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ನಗರದಲ್ಲಿ ಕೇಂದ್ರದ ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸುತ್ತಿರುವ ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು ಹಾಗೂ ಈ ಅನುದಾನದ ಮೊತ್ತವನ್ನು ಯಾವ ಯಾವ ಕಾಮಗಾರಿಗಳಿಗೆ ಬಳಸಲಾಗಿದೆ ;

(ಆ) ಸದರಿ ಯೋಜನೆಯಲ್ಲಿ ರಸ್ತೆ ದುರಸ್ತಿ ಕಾಮಗಾರಿಗಾಗಿ ಎಷ್ಟು ಅನುದಾನ ಮೀಸಲಿಡಲಾಗಿತ್ತು ಮತ್ತು ಎಷ್ಟು ಮೊತ್ತದ ರಸ್ತೆ ದುರಸ್ತಿ ಕಾಮಗಾರಿ ಪೂರ್ಣಗೊಂಡಿದೆ ;

(ಇ) ಬೆಳಗಾವಿ ನಗರಕ್ಕೆ ೨೪ X ೭ ಕುಡಿಯುವ ನೀರು ಪೂರೈಸುವ ಕಾಮಗಾರಿಯನ್ನು M/s L&T Pvt Ltd ಸಂಸ್ಥೆಗೆ ನೀಡಿದ್ದು ಪೈಪ್ ಅಳವಡಿಕೆಗೆ ಈಗಾಗಲೇ ದುರಸ್ಥಿ ಪಡಿಸಿರುವ ರಸ್ತೆಯನ್ನು ಅವೈಜ್ಞಾನಿಕವಾಗಿ ಜೆಸಿಬಿ ಮೂಲಕ ರಸ್ತೆ ಅಗೆಯುತ್ತಿರುವುದು ನಿಜವೇ ; ಇದ್ದಲ್ಲಿ, ಸದರಿ ಕಂಪನಿ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಈ) ಸ್ಮಾರ್ಟ್ ಸಿಟಿ ಯೋಜನೆ ಪೂರ್ಣಗೊಂಡ ನಂತರ ಬೆಳಗಾವಿ ಮಹಾನಗರ ಪಾಲಿಕೆಗೆ ಯಾವಾಗ ಹಸ್ತಾಂತರಿಸಬೇಕಿತ್ತು ಮತ್ತು ಯಾವ ವರ್ಷದಲ್ಲಿ ಇದನ್ನು ಹಸ್ತಾಂತರಿಸಲಾಗಿದೆ ; ವಿಳಂಬಕ್ಕೆ ಕಾರಣಗಳೇನು ಮತ್ತು ಸ್ಮಾರ್ಟ್ ಸಿಟಿ ಯೋಜನೆಯನ್ನು ಈಗ ಯಾರಿಂದ ನಿರ್ವಹಣೆ ಮಾಡಲಾಗುತ್ತದೆ ?

## ರಾಜ್ಯದಲ್ಲಿ ಕೈಮಗ್ಗ ನೇಯ್ಗೆಯಲ್ಲಿ ಹೊರ ರೂಪು-ರೇಷೆಗಳನ್ನು ಜಾರಿಗೆ ತರುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೬೦ (ಜ್ಞಾ) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೈಮಗ್ಗ ನೇಕಾರ ಸಹಕಾರ ಸಂಘಗಳು ಉತ್ಪಾದಿಸುವ ವಸ್ತುಗಳ (ಮಾಲುಗಳ) ಮಾರಾಟಕ್ಕೆ ಶೇಕಡಾ ೨೦ ರಷ್ಟು ರಿಯಾಯಿತಿ ಪ್ರೋತ್ಸಾಹ (ರಿಬೇಟ್) ನೀಡಲಾಗುತ್ತಿದ್ದು ಅದನ್ನು ಶೇಕಡಾ ೪೦ಕ್ಕೆ ವಿಸ್ತರಿಸಬೇಕು ಎಂದು ಹಲವಾರು ವರ್ಷಗಳಿಂದ ಬೇಡಿಕೆ ಇದ್ದು, ನೇಕಾರರ ಸಹಕಾರ ಸಂಘಗಳ ಉಳುವಿಗಾಗಿ ೪೦% ಸಬ್ಸಿಡಿ (ರಿಯಾಯಿತಿ) ನೀಡಲು ಸರ್ಕಾರದ ಚಿಂತನೆ ಇದೆಯೇ ; (ಮಾಹಿತಿ ಒದಗಿಸುವುದು)

(ಆ) ನೇಕಾರರ ನೇಯ್ಗೆಯಲ್ಲಿಯೂ ಬದಲಾವಣೆ ತರುವ ನಿಟ್ಟಿನಲ್ಲಿ ಹಳೆಯ ಶೈಲಿಯ ಮಗ್ಗಗಳಿಂದ ರೆಪಿಯರ್ ಕಂಪ್ಯೂಟರ್ ಜಕಾರ್ಡ್ ನಂತಹ ಮಗ್ಗಗಳಿಗೆ ಬದಲಾಯಿಸಲು ಸರ್ಕಾರ ಮುಂದಾಗಿದೆಯೇ ; (ಮಾಹಿತಿ ನೀಡುವುದು)

(ಇ) ಕೈಮಗ್ಗ ನೇಕಾರರಿಗೆ ಹೊಸ ಯೋಜನೆಗಳೊಂದಿಗೆ ಯುವಕರಿಗೆ ಪ್ರೋತ್ಸಾಹ ನೀಡುವ ದಿಶೆಯಲ್ಲಿ ಕೈಮಗ್ಗ ನೇಕಾರಿಕೆ ಉದ್ಯೋಗದ ಉಳುವಿಗಾಗಿ ಸರ್ಕಾರದ ಎಲ್ಲಾ ಇಲಾಖೆಗಳ ಸಿಬ್ಬಂದಿಗಳು ಕೈಮಗ ಉತ್ಪಾದಿತ ವಸ್ತುಗಳನ್ನು ಖರೀದಿಸಲು ಸರ್ಕಾರ ಆದೇಶ ಮಾಡುವುದೇ ;

(ಈ) ವೃತ್ತಿಪರ ನೇಕಾರರನ್ನು ಕಾರ್ಮಿಕರೆಂದು ಪರಿಗಣಿಸಬೇಕೆಂದು ಅನೇಕ ವರ್ಷಗಳಿಂದ ನೇಕಾರರ ಬೇಡಿಕೆ ಇದ್ದು, ಈ ಬಗ್ಗೆ, ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಕಟ್ಟಡ ಪರವಾನಗಿ ದೊರೆಯದಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೬೧ (೪೮೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆ. ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಗರ ಪ್ರಾಧಿಕಾರದ ಮಹಾ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯಿಂದಾಗಿ ೨೦೧೭ರ ಪೂರ್ವದ ಭೂಪರಿವರ್ತಿತ ಹಾಗೂ ನಮೂನೆ-೩ ರಂತೆ ಗುರುತಿಸಿರುವ ನಿವೇಶನಗಳನ್ನು ಹೊಂದಿರುವ ಖಾತೆದಾರರಿಗೆ ಹೊಸ ಮನೆ ನಿರ್ಮಾಣಕ್ಕಾಗಿ ಕಟ್ಟಡ ಪರವಾನಗಿ ದೊರೆಯದೆ ಮತ್ತು ಈಗಾಗಲೇ ವಾಸವಿರುವ

ಮನೆಗಳ ನವೀಕರಣ ಅಥವಾ ವಿಸ್ತರಣೆಗೆ ಕೂಡ ಪರವಾನಗಿ ದೊರೆಯುದೆ ಸಾರ್ವಜನಿಕರಿಗೆ ದೀರ್ಘಕಾಲದಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ. ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಇದನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ೨೦೧೭ರ ಪೂರ್ವದಲ್ಲಿ ಕೃಷಿಯೇತರ ಉದ್ದೇಶಕ್ಕಾಗಿ ಭೂಪರಿವರ್ತಿತ ಆಸ್ತಿಗಳನ್ನು ಹೊಂದಿರುವವರಿಗೆ ಮಹಾ ಯೋಜನೆಯ ನಿಯಮಗಳನ್ನು ಅನ್ವಯಿಸದೆ. ಈ ಹಿಂದಿನಂತೆ ನಿವೇಶನಗಳ ವಿನ್ಯಾಸ ನಕ್ಷೆಯನ್ನು ಅನುಮೋದಿಸಿ. ಅಧಿಕೃತ ನಿವೇಶನಗಳೆಂದು ಪರಗಣಿಸಿ ಕಟ್ಟಡ ನಿರ್ಮಾಣಕ್ಕೆ ಆಗತ್ಯವಿರುವ ಕಟ್ಟಡ ಪರವಾನಗಿಯನ್ನು ನೀಡಲು ಸರ್ಕಾರ ಇದುವರೆಗೂ ಯಾವುದೇ ಕ್ರಮ ವಹಿಸದೆ ಇರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಸದರಿ ಸಮಸ್ಯೆಯನ್ನು ಪರಿಹರಿಸಲಾಗುವುದು ?

## ಎಲೆ ಚುಕ್ಕೆ ರೋಗದಿಂದಾಗಿ ಆಗಿರುವ ಬೆಳೆ ನಷ್ಟದ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೬೨ (೪೯೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಅಡಿಕೆ ತೋಟಗಳಿಗೆ ವ್ಯಾಪಕವಾಗಿ ಹರಡಿದ ಎಲೆಚುಕ್ಕೆ ರೋಗದಿಂದಾಗಿ ದೊಡ್ಡ ಪ್ರಮಾಣದಲ್ಲಿ ಬೆಳೆ ನಷ್ಟವಾಗಿರುವುದರಿಂದ ಅಡಿಕೆ ಬೆಳೆಗಾರರು ಆರ್ಥಿಕ ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ. ಈ ರೋಗ ಮಳೆಗಾಲದ ಮಧ್ಯದಲ್ಲಿ ಕಾಣಿಸಿಕೊಂಡು ದಿನದಿಂದ ದಿನಕ್ಕೆ ಹೆಚ್ಚುತ್ತಾ ಹೋದದ್ದು ಮತ್ತು ಅದಕ್ಕೆ ಯಾವುದೇ ನಿಯಂತ್ರಣದ ಕ್ರಮಗಳು ಇಲ್ಲದೇ ಹೋದ ಕಾರಣದಿಂದಾಗಿ ಆಗ ಹಸಿ ಅಡಿಕೆ ಉದುರಿದ್ದು ಮಾತ್ರವಲ್ಲದೆ ಅವಧಿಗೂ ಮುಂಚೆ ಹಣ್ಣಾಗತೊಡಗಿದ್ದು ಅಪಾರ ಬೆಳೆ ನಷ್ಟಕ್ಕೆ ಕಾರಣವಾಗಿದ್ದು, ಆ ಕಾರಣದಿಂದಾಗಿ ಸಂಕಷ್ಟಕ್ಕೆ ಸಿಲುಕಿರುವ ಅಡಿಕೆ ಬೆಳೆಗಾರರ ನೆರವಿಗೆ ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಎಲೆಚುಕ್ಕೆ ರೋಗ ನಿಯಂತ್ರಣಕ್ಕೆ ಕೂಡಲೇ ಸಂಶೋಧನಾ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ವಹಿಸಲಿರುವ ಕ್ರಮಗಳೇನು ?

## ಸಹಕಾರಿ ಬ್ಯಾಂಕ್ ವ್ಯವಸ್ಥೆಯ ಸುರಕ್ಷತೆ ಲೋಪದ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೬೩ (೪೯೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇವಲ ಸಹಕಾರಿ ವಲಯವಲ್ಲದೇ. ಇಡೀ ನಾಡನ್ನೇ ಆತಂಕಕ್ಕೆ ದೂಡಿದ ಮಂಗಳೂರಿನ ಕೋಟೆಕಾರು ಸಹಕಾರಿ ಬ್ಯಾಂಕ್ ದರೋಡೆ ಪ್ರಕರಣದ ಹಿನ್ನಲೆಯಲ್ಲಿ ಸಹಕಾರಿ ಬ್ಯಾಂಕ್ ವ್ಯವಸ್ಥೆಯ ಸುರಕ್ಷತೆಯ ಬಗ್ಗೆಯೇ ಸಾರ್ವಜನಿಕರು ಅಪನಂಬಿಕೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಬಂದಿದ್ದಲ್ಲಿ. ಗ್ರಾಮೀಣ ಆರ್ಥಿಕತೆಯ ಆತ್ಮವಾಗಿರುವ ಸೊಸೈಟಿಗಳು. ಭದ್ರತೆ ಮತ್ತು ಸುರಕ್ಷತೆ ವಿಚಾರದಲ್ಲಿ ನಿರ್ಲಕ್ಷತೆ ಮತ್ತು ಉದಾಸೀನತೆಯುನ್ನು ತೋರುತ್ತಾ ಬಂದಿದ್ದು. ಇದನ್ನು ಹೋಗಲಾಡಿಸಲು ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಸರ್ಕಾರ ಅಗತ್ಯ ಭದ್ರತಾ ವ್ಯವಸ್ಥೆಯನ್ನು ಇದುವರೆಗೂ ಕಲ್ಪಿಸದಿರುವ ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗೆ ಸಹಕಾರಿ ಬ್ಯಾಂಕ್ ವ್ಯವಸ್ಥೆಗೆ ಭದ್ರತೆ ಹೆಚ್ಚಿಸಿಕೊಳ್ಳಲು ಬೇಕಾದ ಎಲ್ಲ ಸೌಲಭ್ಯಗಳನ್ನು ಕಲ್ಪಿಸಲು ಅಗತ್ಯ ಕ್ರಮವಹಿಸಲಾಗುವುದು ?

## ದಕ್ಷಿಣ ಕನ್ನಡ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಬಹುತೇಕ ರಸ್ತೆಗಳು ಕಳೆದ ಮಳೆಗಾಲದಲ್ಲಿ ಸುರಿದ ಭಾರಿ ಮಳೆಯಿಂದಾಗಿ ಹಾನಿಯಾಗಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೬೪ (೪೯೨) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಮಳೆಗಾಲದಲ್ಲಿ ಸುರಿದ ಧಾರಾಕಾರ ಮಳೆಯಿಂದಾಗಿ. ನಗರ ಸ್ಥಳೀಯ ಸಂಸ್ಥೆಗಳ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆಗಳ) ವ್ಯಾಪ್ತಿಯ ಬಹುತೇಕ ರಸ್ತೆಗಳು ತೀವ್ರತರವಾಗಿ ಹಾನಿಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಬಂದಿದ್ದಲ್ಲಿ, ಸದರಿ ಹಾನಿಗೀಡಾದ ಎಲ್ಲಾ ರಸ್ತೆಗಳನ್ನು ಈಗಾಗಲೇ ದುರಸ್ತಿ ಮಾಡಲಾಗಿದೆಯೆ ; ಸದರಿ ದುರಸ್ತಿ ಕಾಮಗಾರಿಗಳಿಗೆ ಇದುವರೆಗೆ ವಿನಿಯೋಗಿಸಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಇದುವರೆಗೂ ದುರಸ್ತಿಯಾಗದೇ ಇರುವ ರಸ್ತೆಗಳು ಯಾವುವು ಮತ್ತು ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗೆ ಸದರಿ ಹಾನಿಗೀಡಾಗಿರುವ ರಸ್ತೆ ದುರಸ್ತಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ?

## ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ದೊರೆಯುವ ಸೌಲಭ್ಯಗಳ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೫೬ (೪೯೩) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಸಣ್ಣ ಕೈಗಾರಿಕೆಗಳ ವ್ಯಾಪ್ತಿಗೆ ಸೇರಿದ ಉದ್ದಿಮೆಗಳು ಯಾವುವು ; (ಪಟ್ಟಿ ಒದಗಿಸುವುದು)

(ಆ) ಈ ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರದಿಂದ ದೊರೆಯುವ ಸಾಲ, ಸಹಾಯಧನ ಮತ್ತು ಇತರೇ ಸೌಲಭ್ಯಗಳು ಯಾವುವು ;

(ಇ) ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಮಹಿಳಾ ಉದ್ದಿಮೆದಾರರಿಗೆ ಸರ್ಕಾರದಿಂದ ದೊರೆಯುವ ಹೆಚ್ಚುವರಿ ಮತ್ತು ವಿಶೇಷ ಸವಲತ್ತುಗಳು ಯಾವುವು ;

(ಈ) ಕಳೆದ ಆರ್ಥಿಕ ವರ್ಷದಲ್ಲಿ ಎಷ್ಟು ಜನ ಮಹಿಳಾ ಉದ್ದಿಮೆದಾರರಿಗೆ ಸರ್ಕಾರದಿಂದ ಹೆಚ್ಚುವರಿ ಮತ್ತು ವಿಶೇಷ ಸವಲತ್ತುಗಳು ದೊರೆತಿವೆ ? (ಫಲಾನುಭವಿವಾರು ಸಂಪೂರ್ಣ ವಿವರ ನೀಡುವುದು)

## Metro ದರ ಹೆಚ್ಚಳ ಹಿಂಪಡೆಯುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೬೬ (೫೧೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಒಟ್ಟು ಎಷ್ಟು ಮಾರ್ಗಗಳಲ್ಲಿ ಮೆಟ್ರೋ ಕಾರ್ಯಾಚರಿಸುತ್ತಿದೆ ; ನಮ್ಮ ಮೇಟ್ರೋಗಾಗಿ ಈವರೆಗೆ ವೆಚ್ಚ ಆಗಿರುವ ಹಣ ಎಷ್ಟು ; ಇದರಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲೆಷ್ಟು; ಮೆಟ್ರೋಗಾಗಿ ಪಡೆದಿರುವ ಸಾಲ ಎಷ್ಟು ;

(ಆ) ನಮ್ಮ ಮೆಟ್ರೋ ನಿರ್ವಹಣೆ ಯಾರು ನಿರ್ವಹಿಸುತ್ತಿದ್ದಾರೆ ; ಮೆಟ್ರೋ ನಿರ್ವಹಣೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾತ್ರಗಳೇನು ; ಮೆಟ್ರೋ ಆರಂಭಕ್ಕೂ ಮುನ್ನ ಮಾಡಿಕೊಂಡಿರುವ ಒಡಂಬಡಿಕೆಗಳೇನು ;

(ಇ) ನಮ್ಮ ಮೆಟ್ರೋ ಆರಂಭ ಆದಾಗಿನಿಂದ ಈವರೆಗೆ ಮೆಟ್ರೋದಲ್ಲಿ ಪ್ರಯಾಣಿಸಿರುವ ಪ್ರಯಾಣಿಕರ ಸಂಖ್ಯೆ ಎಷ್ಟು ; (ಮೆಟ್ರೋ ಗಳಿಸಿರುವ ಲಾಭ-ನಷ್ಟದ ವಿವರವನ್ನು ವರ್ಷವಾರು ನೀಡುವುದು)

(ಈ) ಅವೈಜ್ಞಾನಿಕವಾಗಿ ಸರ್ಕಾರ ದರ ಹೆಚ್ಚಳ ಮಾಡಲು ಕಾರಣಗಳೇನು ; ದರ ಹೆಚ್ಚಳದ ನಂತರ ಮೆಟ್ರೋದಲ್ಲಿ ಪ್ರಯಾಣಿಕರ ಸಂಖ್ಯೆ ಕುಸಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೆಚ್ಚಳ ಮಾಡಿರುವ ದರವನ್ನು ಇಳಿಕೆ ಮಾಡುವ ಕುರಿತು ಸರ್ಕಾರದ ನಿಲುವೇನು ?

**ಕೆಐಎಡಿಬಿ ವತಿಯಿಂದ ಹಂಚಿಕೆ ಮಾಡಿರುವ ಸಿಎ ನಿವೇಶನಗಳ ಬಗ್ಗೆ**

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೬೭೭ (೫೨೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ ೦೧-೦೬-೨೦೨೩ ರಿಂದ ಇಲ್ಲಿಯವರೆಗೆ ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಮಂಡಳಿಯಿಂದ ಎಷ್ಟು ಸಿಎ ನಿವೇಶನಗಳನ್ನು ಯಾವ ಸಂಸ್ಥೆಗೆ ಯಾವ ಉದ್ದೇಶಕ್ಕೆ ಹಂಚಿಕೆ ಮಾಡಲಾಗಿದೆ ; (ಸಂಸ್ಥೆವಾರು ವಿವರ ಒದಗಿಸುವುದು)

(ಆ) ಮಂಡಳಿಯಿಂದ ಸಿ.ಎ. ನಿವೇಶನ ಹಂಚಿಕೆ ಮಾಡಲು ಇರುವ ಮಾನದಂಡಗಳೇನು ; ಅರ್ಜಿ ಸಲ್ಲಿಸಲು ನೀಡುವ ಕಾಲಾವಕಾಶ ಎಷ್ಟು ; ಅರ್ಜಿ ಸಲ್ಲಿಸಿದ ನಂತರ ನಿವೇಶನ ಹಂಚಿಕೆ ಮಾಡಲು ಇರುವ ನಿಯಮಗಳೇನು ; ಈ ನಿಯಮಗಳನ್ನು ಪಾಲಿಸಲು ತೆಗೆದುಕೊಳ್ಳುವ ಕಾಲಾವಕಾಶ ಎಷ್ಟು ;

(ಇ) ಹಂಚಿಕೆ ಆಗಿರುವ ನಿವೇಶನವನ್ನು ಅನ್ಯ ಉದ್ದೇಶಕ್ಕೆ ಉಪಯೋಗಿಸಿಕೊಂಡಿರುವ ಪ್ರಕರಣಗಳೆಷ್ಟು ; ಅನ್ಯ ಉದ್ದೇಶಕ್ಕೆ ಬಳಸಿಕೊಂಡ ನಿವೇಶನಗಳನ್ನು ಹಿಂಪಡೆಯಲಾಗಿದೆಯೇ ; (ವಿವರ ನೀಡುವುದು)

(ಈ) ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಮಂಡಳಿಯಲ್ಲಿ ಸಿಎ ನಿವೇಶನ ಹಂಚಿಕೆಯಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಕ್ರಮವಾಗಿ ಹಂಚಿರುವ ಸಿ.ಎ. ನಿವೇಶನದ ಮೌಲ್ಯ ಎಷ್ಟು ; (ವಿವರ ನೀಡುವುದು)

(ಉ) ಸಿಎ ನಿವೇಶನ ಹಂಚಿಕೆಯಲ್ಲಿ ಅವ್ಯವಹಾರಕ್ಕೆ ಸಂಬಂಧಪಟ್ಟಂತೆ ಎಷ್ಟು ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮವೇನು ; ಅಕ್ರಮವಾಗಿ ಹಂಚಿಕೆ ಮಾಡಿದ ನಿವೇಶನಗಳನ್ನು ಹಿಂದಕ್ಕೆ ಪಡೆಯಲಾಗಿದೆಯೇ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕೆ ಉಪಯೋಗಿಸಲು ಭೂಮಿಯನ್ನು ಅನ್ಯಕ್ರಾಂತ ಮಾಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೬೭೮ (ಶ೨೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸ್ಥಳೀಯ ಯೋಜನಾ ಪ್ರಾಧಿಕಾರದಿಂದ ತಯಾರಿಸಿರುವ ಭೂ ಉಪಯೋಗ ಮಹಾಯೋಜನೆಯಲ್ಲಿ ಒಳಗೊಂಡಿರುವ ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಉಪಯೋಗಿಸಲು ಭೂಮಿಯನ್ನು ಅನ್ಯಕ್ರಾಂತ ಮಾಡುವುದರಿಂದ ವಿನಾಯಿತಿ ಇದೆಯೇ ;

(ಆ) ಇದ್ದಲ್ಲಿ, ಯಾವ ಯಾವ ಉದ್ದೇಶಕ್ಕಾಗಿ ಈ ರೀತಿ ಅನ್ಯಕ್ರಾಂತ ಮಾಡುವುದರಿಂದ ವಿನಾಯಿತಿ ಇದೆ ;

(ಇ) ಈ ಬಗ್ಗೆ ಸರ್ಕಾರದಿಂದ ಆದೇಶವನ್ನು ಹೊರಡಿಸಲಾಗಿದೆಯೇ ; (ಆದೇಶದ ಪ್ರತಿ ಒದಗಿಸುವುದು)

(ಈ) ಈ ಆದೇಶವನ್ನು ಸ್ಥಳೀಯ ಮಟ್ಟದಲ್ಲಿ ಜಾರಿಗೊಳಿಸಲಾಗಿದೆಯೇ ; ಇದರಿಂದ ಆಗುವ ಸಾಧಕ ಬಾಧಕಗಳೇನು ? (ವಿವರ ಒದಗಿಸುವುದು)

## ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ಬರಬೇಕಾದ ಬಾಕಿ ಹಣ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೬೯ (೫೨೮) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಪೈಕಿ ಕಬ್ಬಿನ ಬಿಲ್ ಬಾಕಿ ಉಳಿಸಿಕೊಂಡಿರುವ ಸಕ್ಕರೆ ಕಾರ್ಖಾನೆಗಳು ಯಾವುವು ; ಉಳಿಸಿಕೊಂಡಿರುವ ಬಿಲ್ ಮೊತ್ತ ಎಷ್ಟು ; (ಕಾರ್ಖಾನೆವಾರು ವಿವರ ಒದಗಿಸುವುದು)

(ಇ) ಬಾಕಿ ಬಿಲ್ ಉಳಿಸಿಕೊಂಡಿರುವ ಸಕ್ಕರೆ ಕಾರ್ಖಾನೆಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಕಬ್ಬು ಬೆಳೆಗಾರರ ಬಾಕಿ ಬಿಲ್ ಪಾವತಿಯಾಗದೇ ಇರುವುದರಿಂದ ರೈತರು ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಕಾಲ ಮಿತಿಯೊಳಗೆ ರೈತರ ಬಾಕಿ ಬಿಲ್ ಪಾವತಿಸಲಾಗುವುದು ; ಇದಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದ ಗೃಹ ನಿರ್ಮಾಣ ಸಹಕಾರ ಸಂಘಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೭೦ (೪೯೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಷ್ಟು ಗೃಹ ನಿರ್ಮಾಣ ಸಹಕಾರ ಸಂಘಗಳು ನೋಂದಣಿ ಮಾಡಿಕೊಂಡಿವೆ ; ನೋಂದಣಿ ಮಾಡಿಕೊಂಡ ವರ್ಷ, ಅವುಗಳ ಹೆಸರು ಮತ್ತು ವಿಳಾಸದೊಂದಿಗೆ ಸಂಘವಾರು ಮಾಹಿತಿ ನೀಡುವುದು ;

(ಆ) ಈ ಸಂಘಗಳಲ್ಲಿರುವ ಸದಸ್ಯರ ಸಂಖ್ಯೆ ಎಷ್ಟು ; ಸದಸ್ಯತ್ವ ಶುಲ್ಕ, ನಿವೇಶನ ಮುಂಗಡ ಮುಂತಾದ ರೂಪಗಳಲ್ಲಿ ಸದಸ್ಯರಿಂದ ಸಂಗ್ರಹಿಸಲಾದ ನಿಧಿ ಎಷ್ಟು ; ಈ ನಿಧಿಯಲ್ಲಿ ಸಂಘಗಳು ಅಭಿವೃದ್ಧಿಪಡಿಸಿರುವ ಬಡಾವಣೆಗಳು ಯಾವುವು ; ಅವುಗಳ ವಿಸ್ತೀರ್ಣ, ವಿಳಾಸ ಮತ್ತು ಇಲ್ಲಿ ನಿರ್ಮಾಣ ಮಾಡಿರುವ ನಿವೇಶನಗಳ ಹಾಗೂ ಇದರಲ್ಲಿ ಸದಸ್ಯರಿಗೆ ಹಂಚಿಕೆ ಮಾಡಿರುವ ನಿವೇಶನಗಳೆಷ್ಟು ; (ಸಂಘವಾರು ಸಂಪೂರ್ಣ ವಿವರ ನೀಡುವುದು)

(ಇ) ಬಹುತೇಕ ಗೃಹ ನಿರ್ಮಾಣ ಸಹಕಾರ ಸಂಘಗಳು, ಸದಸ್ಯತ್ವ ಶುಲ್ಕ, ನಿವೇಶನ ಮುಂಗಡ ಮುಂತಾದ ರೂಪಗಳಲ್ಲಿ ಸದಸ್ಯರಿಂದ ಸಂಗ್ರಹಿಸಲಾದ ನಿಧಿಯಲ್ಲಿ ಬಡಾವಣೆಗಳನ್ನು ನಿರ್ಮಾಣ ಮಾಡಿ ನಿವೇಶನಗಳನ್ನು ಹಂಚಿಕೆ ಮಾಡದಿರುವ ಬಗ್ಗೆ ಸರ್ಕಾರಕ್ಕೆ ದೂರುಗಳು ಬಂದಿವೆಯೇ ; ಬಂದಿದ್ದಲ್ಲಿ, ಅಂತಹ ಎಷ್ಟು ಸಂಘಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ? (ಸಂಘವಾರು ಮಾಹಿತಿ ನೀಡುವುದು)

## KWIN CITY ಯೋಜನೆ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೭೧ (೪೯೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ KWIN CITY ಯೋಜನೆಯ ಅನುಷ್ಠಾನಕ್ಕೆ ಜಾಗವನ್ನು ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ, ಎಲ್ಲಿ ಗುರುತಿಸಲಾಗಿದೆ ;

(ಆ) ಈ ಯೋಜನೆಗೆ ಅವಶ್ಯಕವಿರುವ ಭೂಮಿ ಎಷ್ಟು ಹಾಗೂ ಇಲ್ಲಿಯವರೆಗೆ ಸ್ವಾಧೀನಪಡಿಸಿಕೊಂಡಿರುವ ಭೂಮಿ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ಸ್ಮಾರ್ಟ್ ಸಿಟಿ ಯೋಜನೆಗಳು ನಿಧಾನಗತಿಯಲ್ಲಿ ಸಾಗುತ್ತಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೭೨ (೪೯೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅನುಷ್ಠಾನಗೊಳ್ಳುತ್ತಿರುವ ಸ್ಮಾರ್ಟ್ ಸಿಟಿ ಯೋಜನೆಯು ಕುಂಟುತ್ತಾ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಯೋಜನೆಯ ಬಹುತೇಕ ಕಾಮಗಾರಿಗಳು ಟೆಂಡರ್ ಹಂತದಲ್ಲಿದ್ದು, ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಇನ್ವೆಸ್ಟ್ ಕರ್ನಾಟಕ ೨೦೨೫ರ ಹೂಡಿಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೭೩ (೫೦೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇತ್ತೀಚೆಗೆ ನಡೆದ ಇನ್ವೆಸ್ಟ್ ಕರ್ನಾಟಕ ೨೦೨೫ರಲ್ಲಿ ಒಟ್ಟು ಎಷ್ಟು ಮೊತ್ತದ ಹೂಡಿಕೆ ಕುರಿತ ಒಪ್ಪಂದಗಳಾಗಿವೆ ; ಯಾವ ಯಾವ ಉದ್ಯಮ ಕ್ಷೇತ್ರದಲ್ಲಿ ಒಪ್ಪಂದಗಳಾಗಿವೆ ; ಎಷ್ಟು ಕಂಪನಿಗಳೊಂದಿಗೆ ಒಡಂಬಡಿಕೆಯಾಗಿದೆ ಹಾಗೂ ಹೂಡಿಕೆಯ ಮೊತ್ತವೆಷ್ಟು ; (ಕಂಪನಿವಾರು ಮಾಹಿತಿ ನೀಡುವುದು)

(ಆ) ಈ ಒಪ್ಪಂದಗಳಿಂದ ರಾಜ್ಯದ ಯಾವ ಭಾಗದಲ್ಲಿ ಉದ್ದಿಮೆಗಳು ಪ್ರಾರಂಭವಾಗಲಿವೆ ; ಇದರಿಂದ ಎಷ್ಟು ನೇರ ಮತ್ತು ಪರೋಕ್ಷ ಉದ್ಯೋಗಗಳ ಸೃಷ್ಟಿಗೆ ಅವಕಾಶವಿದೆ ; ಉದ್ಯೋಗ ನೇಮಕಾತಿಯಲ್ಲಿ ಕನ್ನಡಿಗರಿಗೆ ಪ್ರಾಶಸ್ತ್ಯ ನೀಡಬೇಕು ಎಂಬುದಾಗಿ ಒಪ್ಪಂದ ಮಾಡಿಕೊಳ್ಳಲಾಗಿದೆಯೇ ; (ವಿವರ ನೀಡುವುದು)

(ಇ) ಹೂಡಿಕೆ ಮಾಡುವ ಕಂಪನಿಗಳಿಗೆ ಸರ್ಕಾರ ಯಾವ ಯಾವ ರೀತಿಯ ವಿನಾಯಿತಿ/ರಿಯಾಯಿತಿ ನೀಡುವ ಕುರಿತು ಒಪ್ಪಂದ ಆಗಿವೆ ; (ವಿವರ ನೀಡುವುದು)

(ಈ) ಸರ್ಕಾರ ನೀಡುವ ವಿನಾಯಿತಿ ಮತ್ತು ರಿಯಾಯಿತಿಗಳಿಗೆ ಬದಲಾಗಿ ಸ್ಥಳೀಯರಿಗೆ ಉದ್ಯೋಗ ನೀಡಬೇಕು ಎನ್ನುವ ಷರತ್ತು ವಿಧಿಸಲಾಗಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ನೇಕಾರರಿಗೆ ನೀಡುವ ಸೌಲಭ್ಯಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೭೪ (೪೯೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ನೇಕಾರ ಸಮ್ಮಾನ್ ಯೋಜನೆಯಡಿ ಎಷ್ಟು ನೇಕಾರರಿಗೆ ಆರ್ಥಿಕ ನೆರವು ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೨ ವರ್ಷದಲ್ಲಿ ಎಷ್ಟು ನೇಕಾರರ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡಲಾಗಿದೆ ; ಇದಕ್ಕೆ ಮಾಡಲಾಗಿರುವ ಒಟ್ಟು ವೆಚ್ಚ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೨ ವರ್ಷದಲ್ಲಿ ಎಷ್ಟು ಜವಳಿ ಪಾರ್ಕ್‌ಗಳು ಸ್ಥಾಪಿಸಲಾಗಿದೆ ; ಇದರಿಂದ ಎಷ್ಟು ಉದ್ಯೋಗಗಳು ಸೃಷ್ಟಿಯಾಗಿದೆ ? (ವಿವರ ನೀಡುವುದು)

## ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ಯಮಗಳ ಕಾರ್ಮಿಕರಿಗೆ ನೀಡುವ ಸೌಲಭ್ಯಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೫ (೫೦೦) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳಲ್ಲಿನ ಕಾರ್ಮಿಕರಿಗೆ ಸರ್ಕಾರದಿಂದ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತದೆ ;

(ಆ) ಈ ಕಾರ್ಮಿಕರಿಗೆ ಕನಿಷ್ಠ ವೇತನ ಹಾಗೂ ಗೌರವಾನ್ವಿತ ಜೀವನ ಸಾಗಿಸಲು ಅನುವಾಗುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಸದರಿ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸ ಉನ್ನತ ಶಿಕ್ಷಣ ಮತು ವಿಶೇಷವಾಗಿ ಹೆಣ್ಣು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ನಡೆಯುತ್ತಿರುವ ಅಕ್ರಮ ಮರಳು ಗಾಣಿಗಾರಿಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೬ (೫೦೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷ ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ ಎಷ್ಟು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಮರಳು ಗಣಿಗಾರಿಕೆಗೆ ಅನುಮತಿ ನೀಡಲು ಇರುವ ನಿಯಮಗಳೇನು ; ಅಕ್ರಮ ಮರಳು ಗಣಿಗಾರಿಕೆ ತಡೆಯಲು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಇತ್ತೀಚಿಗಿನ ದಿನಗಳಲ್ಲಿ ಅಕ್ರಮ ಮರಳು ಗಣಿಗಾರಿಕೆ ತಡೆಯಲು ಹೋದ ಭದ್ರಾವತಿಯ ತಹಶೀಲ್ದಾರರಿಗೆ ಸ್ಥಳೀಯ ಶಾಸಕರ ಮಗ ಬೆದರಿಕೆ ಹಾಕಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಇಲಾಖಾವತಿಯಿಂದ ಸದರಿ ಮಹಿಳಾ ತಹಶೀಲ್ದಾರರ ರಕ್ಷಣೆಗೆ ಕೈಗೊಂಡ ಕ್ರಮಗಳೇನು ; ಇಲಾಖಾವತಿಯಿಂದ ಪೊಲೀಸ್ ಠಾಣೆಯಲ್ಲಿ ದೂರು ದಾಖಲು ಮಾಡಲಾಗಿದೆಯೇ ? (ವಿವರ ನೀಡುವುದು)

## ಘನ ತ್ಯಾಜ್ಯ ನಿರ್ವಹಣೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೭೭ (೫೦೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಘನ ತ್ಯಾಜ್ಯ ನಿರ್ವಹಣೆಯಲ್ಲಿ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳು ಸಮರ್ಪಕವಾಗಿ ನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೨ ವರ್ಷದಲ್ಲಿ ಘನತ್ಯಾಜ್ಯ ನಿರ್ವಹಣೆಗಾಗಿ ಮಾಡಿರುವ ವೆಚ್ಚ ಎಷ್ಟು ; ಘನತ್ಯಾಜ್ಯ ನಿರ್ವಹಣೆಯಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಘನ ತ್ಯಾಜ್ಯ ನಿರ್ವಹಣೆಯಲ್ಲಿ ಪರಿಸರದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಸರ್ಕಾರದ ನಿಲುವೇನು ; ಘನ ತ್ಯಾಜ್ಯವನ್ನು ಯಾವ ರೀತಿಯಲ್ಲಿ ವಿಲೇವಾರಿ ಮಾಡಲಾಗುತ್ತದೆ ? (ವಿವರ ನೀಡುವುದು)

## ಬಳ್ಳಾರಿ ಮಹಾನಗರ ವ್ಯಾಪ್ತಿಯಲ್ಲಿ ಪರವಾನಗಿ ಪಡೆದ ಕಟ್ಟಡಗಳ ಕುರಿತು

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೭೮ (೫೦೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೮-೧೯ ರಿಂದ ೨೦೨೩-೨೪ರ ಸಾಲಿನಲ್ಲಿ ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೋವಿಡ್-೧೯ ಸಂದರ್ಭದಲ್ಲಿ ವಸತಿ ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ಪರವಾನಗಿ ಪಡೆದ ಕಟ್ಟಡಗಳ ಸಂಖ್ಯೆ ಎಷ್ಟು ;

(ಆ) ವಸತಿಗೆ ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ಪರವಾನಗಿ ಪಡೆದ ಕಟ್ಟಡಗಳಲ್ಲಿ ಪೂರ್ಣಗೊಂಡ ಹಾಗೂ ಅಪೂರ್ಣಗೊಂಡ ಕಟ್ಟಡಗಳ ಸಂಖ್ಯೆ ಎಷ್ಟು ;

(ಇ) ಅಪೂರ್ಣಗೊಂಡ ಕಟ್ಟಡಗಳಿಗೆ ಹೆಚ್ಚುವರಿ ದಂಡ ಶುಲ್ಕ ಪಡೆದ ವಸತಿ ಹಾಗೂ ವಾಣಿಜ್ಯ ಕಟ್ಟಡಗಳ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ನೀಡಿರುವ ಕಟ್ಟಡ ನಿರ್ಮಾಣ ಪರವಾನಗಿಯನ್ನು ವಿಸ್ತರಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೭೯ (೫೦೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್-೧೯ ಮಾರಕ ಖಾಯಿಲೆಯಿಂದ ಸಾರ್ವಜನಿಕರಿಗೆ ಆರ್ಥಿಕ ನಷ್ಟ ಉಂಟಾಗಿರುವುದರಿಂದ ಪರವಾನಗಿ ಪಡೆದ ವಸತಿ/

ವಾಣಿಜ್ಯ ಕಟ್ಟಡ ನಿರ್ಮಾಣ ಅಪೂರ್ಣಗೊಂಡಲ್ಲಿ ಕಟ್ಟಡ ಪರವಾನಗಿ ಅವಧಿ ಮುಗಿದಿದ್ದು ಮತ್ತೊಮ್ಮೆ ಕಾಲಾವಕಾಶ ನೀಡಲಾಗಿದೆಯೇ ; ಅವಕಾಶ ನೀಡಿದ್ದಲ್ಲಿ, ಮಾಹಿತಿ ಒದಗಿಸುವುದು ;

(ಆ) ಪರವಾನಗಿಗೆ ಅವಕಾಶ ನೀಡದೇ ಅಪೂರ್ಣಗೊಂಡ ಕಟ್ಟಡವನ್ನು ಪೂರ್ಣಗೊಳಿಸಲು ಯಾವ ಕ್ರಮ ಅನುಸರಿಸಲಾಗುವುದು ; ಇಲ್ಲದಿದ್ದಲ್ಲಿ, ಸರ್ಕಾರದಿಂದ ಯಾವ ಕ್ರಮ ಜರುಗಿಸಲಾಗುವುದು ?

## ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯ ವಸತಿ ಪ್ರದೇಶದಲ್ಲಿ ವಾಣಿಜ್ಯ ಕಟ್ಟಡ ನಿರ್ಮಾಣದ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೮೦ (೫೦೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯ ವಸತಿ ಪ್ರದೇಶದಲ್ಲಿ (Residential Zone) ೪೦ ಅಡಿ ವಿಸ್ತೀರ್ಣಕ್ಕಿಂತ ಹೆಚ್ಚು ರಸ್ತೆ ಲಭ್ಯವಿದ್ದಲ್ಲಿ ವಾಣಿಜ್ಯ ಕಟ್ಟಡ ನಿರ್ಮಾಣ ಮಾಡಲು ಅವಕಾಶವಿದೆಯೇ ;

(ಆ) ಇದ್ದಲ್ಲಿ, ವಸತಿ ಪ್ರದೇಶದಲ್ಲಿ (Residential Zone) ವಾಣಿಜ್ಯ ಕಟ್ಟಡ ನಿರ್ಮಾಣ ಮಾಡಲು ಅನುಸರಿಸಬೇಕಾದ ಮಾನದಂಡಗಳೇನು ; (ಮಾಹಿತಿ ನೀಡುವುದು)

(ಇ) ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ೨೦ನೇ ವಾರ್ಡ್ ಸೇರಿದಂತೆ ವಸತಿ ಪ್ರದೇಶದಲ್ಲಿ (Residential Zone) ವಾಣಿಜ್ಯ ಕಟ್ಟಡ ನಿರ್ಮಾಣ, ಕಟ್ಟಡಗಳ ಸಂಖ್ಯೆ ಹಾಗೂ ವಿಸ್ತೀರ್ಣ ಎಷ್ಟು ;

(ಈ) ವಸತಿ ಪ್ರದೇಶದಲ್ಲಿ (Residential Zone) ೪೦ ಅಡಿ ವಿಸ್ತೀರ್ಣಕ್ಕಿಂತ ಹೆಚ್ಚು ರಸ್ತೆಯಲ್ಲಿ ವಾಣಿಜ್ಯ ಕಟ್ಟಡ ನಿರ್ಮಾಣ ಮಾಡಲು ಅವಕಾಶ ಇಲ್ಲದಿದ್ದಲ್ಲಿ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ? (ಮಾಹಿತಿ ಒದಗಿಸುವುದು)

## ಕಸ ವಿಲೇವಾರಿ ವಾಹನಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮೧ (೫೯೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಹಾನಗರ ಪಾಲಿಕೆಯಲ್ಲಿ ಒಟ್ಟು ಎಷ್ಟು ಕಸ ವಿಲೇವಾರಿ ಲಘು ವಾಹನ ಮತ್ತು ಭಾರಿ ವಾಹನಗಳು ಇವೆ ; (ನಗರವಾರು ಮಾಹಿತಿ ನೀಡುವುದು)

(ಆ) ಕಸ ವಿಲೇವಾರಿ ಮಾಡುವ ವಾಹನಗಳ-ಚಾಲ್ತಿಯಲ್ಲಿ ಇರುವ ವಾಹನಗಳ ಸಂಖ್ಯೆ ಎಷ್ಟು ; (ಲಘು ಮತ್ತು ಭಾರಿ ವಾಹನಗಳ ಮಾಹಿತಿ ಒದಗಿಸುವುದು)

(ಇ) ಕಸ ವಿಲೇವಾರಿ ಮಾಡುತ್ತಿರುವ ವಾಹನ ಭತ್ಯೆ ಮತ್ತು ಚಾಲಕ ಭತ್ಯೆ ಮುಂತಾದ ಖರ್ಚುಗಳು ಎಷ್ಟು ; ಅದಕ್ಕೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಸ ವಿಲೇವಾರಿ ಸಿಬ್ಬಂದಿಗಳಿಗೆ ವೇತನ ಹೆಚ್ಚಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಹಾಲು ಉತ್ಪಾದಕರ ಪ್ರೋತ್ಸಾಹಧನ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮೭ (೫೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಪ್ರತಿ ಲೀಟರ್ ಗುಣಮಟ್ಟದ ಹಾಲಿಗೆ ನಿಗದಿ ಪಡಿಸಿರುವ ಪ್ರೋತ್ಸಾಹಧನ ಎಷ್ಟು ;

(ಆ) ಪ್ರೋತ್ಸಾಹಧನ ವಿಳಂಬವಾಗುತ್ತಿರುವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಎಲ್ಲಾ ವರ್ಗದ ಹಾಲು ಉತ್ಪಾದಕರಿಗೆ ಎಷ್ಟು ತಿಂಗಳುಗಳ ಪ್ರೋತ್ಸಾಹಧನ ಬಾಕಿ ಇದೆ ? (ಜಿಲ್ಲಾವಾರು ಸಾಮಾನ್ಯ ಪರಿಶಿಷ್ಟ ಜಾತಿ ಮತ್ತು ಪಂಗಡವಾರು ಸಂಪೂರ್ಣ ಮಾಹಿತಿ ನೀಡುವುದು)

## ಏರ್ ಶೋ ಟಿಕೇಟ್ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮೩ (೬೦೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಏರ್ ಶೋ ಟಿಕೇಟ್ ಮೂಲಸೌಲಭ್ಯ ಇಲಾಖೆಯಿಂದ ಯಾವ ಯಾವ ಇಲಾಖೆಗೆ ಎಷ್ಟು ಟಿಕೇಟ್ ಬಿಡುಗಡೆ ಮಾಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಪ್ರತಿ ಶಾಸಕರು ಅಥವಾ ಸಚಿವರಿಗೆ ಬಿಡುಗಡೆಯಾದ ಪಾಸ್ ಎಷ್ಟು ;

(ಇ) ಶಾಸಕರ ಪತ್ರದ ಮೂಲಕ ಅವರ ಕುಟುಂಬ ಅಥವಾ ಕ್ಷೇತ್ರದ ಜನತೆ ವೀಕ್ಷಿಸಲು ಹೆಚ್ಚುವರಿ ಪಾಸ್ ಕೇಳಿದ್ದರೂ ನೀಡದಿರಲು ಕಾರಣವೇನು ; ನೀಡದಿದ್ದಲ್ಲಿ, ಶಾಸಕರ ಪ್ರತದಲ್ಲಿ ಆಧಾರ್ ಸಂಖ್ಯೆ ಪಡೆದು ನೀಡದಿರಲು ಕಾರಣವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಅವಶ್ಯಕತೆ ಇದೆ ಎಂದು ಪತ್ರ ರವಾನಿಸಿದ ಮೇಲೆ ಪಾಸ್ ನೀಡುವ ಸೌಲಭ್ಯ ಇಲಾಖೆಗೆ ಸೇರಿದೆಯೇ ;

(ಉ) ಯಲಹಂಕದಲ್ಲಿ ಏರ್ ಶೋ ನಡೆಯುವ ಸಮಯದಲ್ಲಿ ಮೂಲಸೌಲಭ್ಯ ಅಧಿಕಾರಿಗಳು ವಿಐಪಿ ಪಾಸ್ ಇದ್ದರು ಸಹ ಅಧಿಕಾರಿಗಳು ಮೂಲಸೌಲಭ್ಯ ಕ್ಯಾಬಿನ್ ಒಳಗೆ ಬಿಡದಿರಲು ಕಾರಣವೇನು, ಅದಕ್ಕೆ ಸರ್ಕಾರದಿಂದ ಯಾವ ನಿಯಮ ಮಾಡಲಾಗಿತ್ತು ; ಕ್ಯಾಬಿನ್ ಒಳಗಡೆ ಶಾಸಕರ ಕುಟುಂಬದವರಿಗೆ ಅನುಮತಿ ಇದೆಯೇ ? (ಸಂಪೂರ್ಣ ವಿವರ ನೀಡುವುದು)

## ಕಲ್ಲು ಗಣಿಗಾರಿಕೆ ನಡೆಯುತ್ತಿರುವ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮೮೪ (೬೦೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆ, ಹಾಸನ ತಾಲ್ಲೂಕು ಶಾಂತಿ ಗ್ರಾಮ ಹೋಬಳಿಯ ಅಂಕನಹಳ್ಳಿ ಗ್ರಾಮದಲ್ಲಿ ನಡೆಯುತ್ತಿರುವ ಕಲ್ಲು ಗಣಿಗಾರಿಕೆಗೆ ಪರವಾನಗಿ ನೀಡಲಾಗಿದೆಯೇ ; ನೀಡಿದ್ದಲ್ಲಿ, ಎಷ್ಟು ವರ್ಷಗಳಿಗೆ ನೀಡಲಾಗಿದೆ ; (ಸಂಪೂರ್ಣ ದಾಖಲಾತಿಯೊಂದಿಗೆ ಮಾಹಿತಿ ನೀಡುವುದು)

(ಆ) ಅಂಕನಹಳ್ಳಿ ಗ್ರಾಮದಲ್ಲಿ ಯಾವ ಯಾವ ಸರ್ವೆ ನಂಬರ್‌ಗಳಲ್ಲಿ ಕಲ್ಲು ಗಣಿಗಾರಿಕೆ ಮಾಡಲು ಅನುಮತಿ ನೀಡಲಾಗಿದೆ ; ಅದನ್ನು ಪರಿಶೀಲಿಸಲಾಗಿದೆಯೇ ; (ಸಂಪೂರ್ಣ ಮಾಹಿತಿ ಹೆಸರು, ಸರ್ವೆ ನಂಬರ್ ಎಲ್ಲಾ ದಾಖಲೆ ನೀಡುವುದು)

(ಇ) ಅಲ್ಲಿ ಗಣಿಗಾರಿಕೆ ಮಾಡುತ್ತಿರುವ ಕಲ್ಲು ಯಾವುದೆಂದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಗಣಿಗಾರಿಕೆಯಿಂದ ಅಕ್ಕ ಪಕ್ಕದ ಜಮೀನಿನಲ್ಲಿ ಕಲ್ಲು ಹಾಕಿ ತೊಂದರೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ?

## ಮುದಗಲ್ ಪಟ್ಟಣಕ್ಕೆ ಕುಡಿಯುವ ನೀರನ್ನು ಒದಗಿಸುವ ಕಾಮಗಾರಿ ಕುರಿತು

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೮೫ (೫೬೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆಯ, ಲಿಂಗಸಗೂರು ತಾಲ್ಲೂಕಿನ ಮುದಗಲ್ ಪಟ್ಟಣಕ್ಕೆ ೨೪x೭ ಕುಡಿಯುವ ನೀರನ್ನು ಒದಗಿಸುವ ಕಾಮಗಾರಿ ಯಾವಾಗ ಪ್ರಾರಂಭವಾಯಿತು ; ಸದರಿ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಈ ಕಾಮಗಾರಿಯು ಸ್ಥಗಿತಗೊಂಡಿದ್ದಲ್ಲಿ, ಇದಕ್ಕೆ ಕಾರಣವೇನು ;

(ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಈ ಕಾಮಗಾರಿಯ ಅಂದಾಜು ಮೊತ್ತವೆಷ್ಟು ; ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ಹಾಗೂ ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ಒದಗಿಸುವುದು)

## KIADB ವತಿಯಿಂದ ಮಂಜೂರಾದ ಭೂಮಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೈಗಾರಿಕೆಗಳ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮೬ (೫೪೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಹತ್ತು ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ಎಷ್ಟು ಕೈಗಾರಿಕೆಗಳಿಗೆ ಸರ್ಕಾರಿ ಭೂಮಿಯನ್ನು ಮಂಜೂರು ಮಾಡಲಾಗಿದೆ ; (ಜಿಲ್ಲಾವಾರು ಮತ್ತು ಕಂಪನಿವಾರು ಮಾಹಿತಿ ಪ್ರತ್ಯೇಕವಾಗಿ ನೀಡುವುದು)

(ಆ) ಈ ಮಂಜೂರಾದ ಭೂಮಿ ಬಳಸಿಕೊಂಡು ಅಸ್ತಿತ್ವಕ್ಕೆ ಬಂದು ಕಾರ್ಯರಂಭ ಮಾಡಿರುವ ಕೈಗಾರಿಕೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು) ಮತ್ತು ಸದರಿ ಕಂಪನಿಗಳಲ್ಲಿ ಸೃಷ್ಟಿಯಾದ ಉದ್ಯೋಗ ಮತ್ತು ಸರ್ಕಾರಕ್ಕೆ ಬರುತ್ತಿರುವ ಆದಾಯವೆಷ್ಟು ; (ಕಂಪನಿವಾರು ಮಾಹಿತಿ ಪ್ರತ್ಯೇಕವಾಗಿ ಸಂಪೂರ್ಣ ವಿವರ ನೀಡುವುದು)

(ಇ) ಕೆ.ಐ.ಎ.ಡಿ.ಬಿ ವತಿಯಿಂದ ಭೂಮಿ ಮಂಜೂರಾದರೂ ಕೈಗಾರಿಕೆಗಳನ್ನು ಸ್ಥಾಪಿಸದೆ ಇರುವ ಕಂಪನಿಗಳು ಯಾವುವು ; ಮತ್ತು ಇವರುಗಳು ಕೈಗಾರಿಕೆಗಳನ್ನು ಸ್ಥಾಪಿಸದಿರಲು ಕಾರಣಗಳೇನು ; (ವಿವರ ನೀಡುವುದು)

(ಈ) ಸರ್ಕಾರಿ ಭೂಮಿ ಮಂಜೂರಾದರೂ ಅದನ್ನು ಬಳಸದೇ ಮತ್ತು ಕೈಗಾರಿಕೆ ಸ್ಥಾಪನೆ ಮಾಡದ ಬೃಹತ್ ಕೈಗಾರಿಕೆಗಳಿಂದ ಮಂಜೂರಾದ ಭೂಮಿಯನ್ನು ವಾಪಸ್ ಪಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ಮತ್ತು ಈವರೆಗೆ ಎಷ್ಟು ಭೂಮಿಯನ್ನು ಮರಳಿ ಪಡೆದಿದೆ ?

## ಕರ್ನಾಟಕ ನಗರ ಮತ್ತು ಯೋಜನಾ ಇಲಾಖೆ ಸೇವೆಗಳ (ನೇಮಕಾತಿ) ನಿಯಮಗಳ ಕುರಿತು

**ಶ್ರೀ ಟಿ.ಎ ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮೭ (೫೫೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ನಗರ ಮತ್ತು ಯೋಜನಾ ಇಲಾಖೆ ಸೇವೆಗಳು (ನೇಮಕಾತಿ) ನಿಯಮಗಳು ೧೯೯೬ನ್ನು ಯಾವಾಗ ಜಾರಿಗೆ ತರಲಾಯಿತು ;

(ಆ) ಸದರಿ ನಿಯಮಗಳನ್ನು ಇಲ್ಲಿಯವರೆಗೆ ಎಷ್ಟು ಬಾರಿ ತಿದ್ದುಪಡಿ ಮಾಡಲಾಗಿದೆ ; (ತಿದ್ದುಪಡಿ ಮಾಡಲಾದ ನಿಯಮಗಳ ಸಂಪೂರ್ಣ ಮಾಹಿತಿ ನೀಡುವುದು)

(ಇ) ಕರ್ನಾಟಕ ನಗರ ಮತ್ತು ಯೋಜನಾ ಇಲಾಖೆ ಸೇವೆಗಳು (ನೇಮಕಾತಿ) ನಿಯಮಗಳು ೨೦೧೯ರ ಕರಡು ಪ್ರತಿ ಪ್ರಕಟಿಸಿ ಅಂತಿಮಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸದರಿ ಕರಡು ಪ್ರತಿ ಅಂತಿಮಗೊಳಿಸದಿರಲು ಕಾರಣಗಳೇನು ; ಹಾಗೂ ಯಾವ ಕಾಲಮಿತಿಯಲ್ಲಿ ಕರಡು ಪ್ರತಿಯನ್ನು ಅಂತಿಮಗೊಳಿಸಲಾಗುವುದು ?

## ಸಹಕಾರಿ ಸಂಸ್ಥೆಗಳಲ್ಲಿ ಸದಸ್ಯರಾಗಿ ನೋಂದಾಯಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೪೮೮ (೫೩೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಡತನ ರೇಖೆಗಿಂತ ಕೆಳಗಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲ್ಪಸಂಖ್ಯಾತ ಮಹಿಳಾ ಹಾಗೂ ಅಂಗವಿಕಲರಿಗೆ ವಿವಿಧ ಸಹಕಾರಿ ಸಂಸ್ಥೆಗಳಲ್ಲಿ ಸದಸ್ಯರಾಗಿ ನೋಂದಾಯಿಸುವ ಯೋಜನೆಯನ್ನು ಯಾವಾಗ ಜಾರಿಗೆ ತರಲಾಯಿತು ;

(ಆ) ಈ ಯೋಜನೆಯ ಉದ್ದೇಶವೇನು ; ನೊಂದಣಿ ಮಾಡಲು ಹಣವನ್ನು ಫಲಾನುಭವಿಗಳು ಭರಿಸಬೇಕೆ ; ನೋಂದಣಿ ಮಾಡಲು ಬೇಕಾಗುವ ಮೊತ್ತವೆಷ್ಟು ;

(ಇ) ಈ ಯೋಜನೆ ಜಾರಿಯಾದಗಿನಿಂದ ಇಂದಿನವರೆಗೂ ನೋಂದಣಿಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ?

## ನೇಕಾರರಿಗೆ ಯಶಸ್ವಿನಿ ಯೋಜನೆ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೪೮೯ (೫೩೭) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನೇಕಾರರಿಗೆ "ಯಶಸ್ವಿನಿ" ಯೋಜನೆ ನೀಡಲಾಗುತ್ತಿದೆಯೇ ; ಪ್ರತಿ ಕುಟುಂಬಕ್ಕೆ ಎಷ್ಟು ವಂತಿಗೆ ನೇಕಾರರು ನೀಡಬೇಕಾಗಿದೆ ;

(ಆ) ಯಾವ ಯಾವ ಚಿಕಿತ್ಸೆ ಪಡೆಯಬಹುದಾಗಿದೆ ; ಇದುವರೆಗೂ ಎಷ್ಟು ಜನ ಈ ಸೌಲಭ್ಯವನ್ನು ಪಡೆದಿದ್ದಾರೆ ; (೨೦೨೩ ರಿಂದ ಇಲ್ಲಿಯವರೆಗೂ ಮಾಹಿತಿ ನೀಡುವುದು)

(ಇ) ಎಷ್ಟು ಜನ ನೇಕಾರರ ಮಹಿಳೆಯರಿಗೆ ಈ ಸೌಲಭ್ಯ ದೊರೆತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ನೇಕಾರರು ಕಟ್ಟುವ ವಂತಿಗೆಯನ್ನು ಸರ್ಕಾರವೇ ಭರಿಸಲು ಏನಾದರೂ ಚಿಂತೆ ಸರ್ಕಾರಕ್ಕಿದೆಯೇ ?

## ಪೌರಕಾರ್ಮಿಕರ ಹುದ್ದೆಯನ್ನು ಖಾಯಂಗೊಳಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೪೯೦ (೫೩೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪುರಸಭೆ ಹಾಗೂ ನಗರಸಭೆಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು ;

(ಇ) ಈ ಕಾರ್ಮಿಕರನ್ನು ಖಾಯಂಗೊಳಿಸಲಾಗಿದೆಯೇ ;

(ಈ) ಪ್ರತಿಯೊಬ್ಬ ಕಾರ್ಮಿಕರು ಪಡೆಯುತ್ತಿರುವ ಸಂಭಳ ಎಷ್ಟು ; ಈ ಸಂಬಳವನ್ನು ಸರ್ಕಾರವೇ ಭರಿಸುತ್ತಿದೆಯೇ ;

(ಉ) ಸರ್ಕಾರ ಪ್ರತಿವರ್ಷ ಈ ಕಾರ್ಮಿಕರ ಸಂಬಳಕ್ಕೆ ಮೀಸಲಿಟ್ಟ ಹಣವೆಷ್ಟು ?

## ಮಹಿಳಾ ಕೈಮಗ್ಗ ನೇಕಾರರಿಗೆ ತರಬೇತಿ ನೀಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೪೯೧ (೫೩೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಹಿಳಾ ಕೈಮಗ್ಗ ನೇಕಾರ ಸಹಕಾರಿ ಸಂಘಗಳಿವೆಯೇ ; ಇದ್ದಲ್ಲಿ ಅವು ಯಾವುವು ; (ವಿವರ ನೀಡುವುದು)

(ಆ) ಮಹಿಳಾ ಕೈಮಗ್ಗ ನೇಕಾರಿಕೆ ಮಾಡುವವರಿಗೆ ತರಬೇತಿ ನೀಡಲಾಗುತ್ತಿದೆಯೇ ;

(ಇ) ತರಬೇತಿ ಹೊಂದಿ ಸ್ವಯಂ ಉದ್ಯೋಗ ನಡೆಸುತ್ತಿರುವ ಮಹಿಳೆಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಜವಳಿ ಉದ್ಯಮದಲ್ಲಿ ಉದ್ಯಮಿಗಳಾಗಿ ಎಷ್ಟು ಮಹಿಳೆಯರು ಭಾಗವಹಿಸುತ್ತಾರೆ ಇವರಿಗೆ ಯಾವ ರೀತಿ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ?

## ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಶೂನ್ಯ ಬಡ್ಡಿ ಸಾಲ ನೀಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೪೯೨ (೫೪೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸ್ವ ಉದ್ಯೋಗವನ್ನು ಪ್ರೋತ್ಸಾಹಿಸಲು ಶೂನ್ಯ ಬಡ್ಡಿ ದರದ ಸಾಲವನ್ನು ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಎಷ್ಟು ಮಹಿಳಾ ಸ್ವ-ಸಹಾಯ ಗುಂಪಿಗೆ ಶೂನ್ಯ ಬಡ್ಡಿ ಸಾಲವನ್ನು ನೀಡಲಾಗಿದೆ ;

(ಆ) ಪ್ರತಿ ವರ್ಷ ಇದಕ್ಕಾಗಿ ಮೀಸಲಿಡುವ ಹಾಗೂ ಬಳಕೆಯಾಗಿರುವ ಅನುದಾನ ಎಷ್ಟು ? (೫ ವರ್ಷಗಳ ಮಾಹಿತಿ ನೀಡುವುದು)

## ಕೈಗಾರಿಕಾ ಸ್ಥಾಪನೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೩ (೫೫೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆ ವ್ಯಾಪ್ತಿಯಲ್ಲಿ ಹೊಸದಾಗಿ ಕೈಗಾರಿಕೆ ಸ್ಥಾಪನೆಗೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಸರ್ಕಾರ ಹೊಸದಾಗಿ ಕೈಗಾರಿಕೆ ಸ್ಥಾಪನೆ ಮಾಡಿ ಕಲ್ಯಾಣ ಕರ್ನಾಟಕ ನಿರುದ್ಯೋಗ ವಿದ್ಯಾವಂತರಿಗೆ ಉದ್ಯೋಗ ಕಲ್ಪಿಸಲು ಅನುಕೂಲ ಮಾಡಿಕೊಡುವುದೇ ;

(ಇ) ಈ ಭಾಗದಲ್ಲಿ ಯಾವಾಗ ಕೈಗಾರಿಕೆ ಸ್ಥಾಪನೆ ಪ್ರಾರಂಭಿಸಲಾಗುವುದು ? (ಮಾಹಿತಿ ನೀಡುವುದು)

## ಮಳಿಗೆ ಮತ್ತು ನಿವೇಶನ ಹಂಚಿಕೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೪ (೫೫೭) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ವ್ಯಾಪ್ತಿಯಲ್ಲಿ ಕಳೆದ ೨ ವರ್ಷದಲ್ಲಿ ಹಂಚಿಕೆಯಾದ ಮಳಿಗೆ ಮತ್ತು ನಿವೇಶನಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಮಳಿಗೆ ಮತ್ತು ನಿವೇಶನ ಹಂಚಿಕೆ ಮಾಡಲು ಯಾವ ಯಾವ ಮಾನದಂಡಗಳನ್ನು ಅನುಸರಿಸಲಾಗಿದೆ ? (ಮಾಹಿತಿ ನೀಡುವುದು)

## ಯಶಸ್ವಿ ಯೋಜನೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೫ (೫೫೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಲ್ಲಿ ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಸಹಕಾರ ಸಂಘಗಳ ಸದಸ್ಯರಿಗೆ ಸರ್ಕಾರವು ರೂಪಿಸಿರುವ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಗೆ ಎಷ್ಟು ಜನ ಸದಸ್ಯರು ನೋಂದಣಿ ಮಾಡಿಕೊಂಡಿದ್ದಾರೆ ; (ತಾಲ್ಲೂಕುವಾರು ವಿವರ ಅಂಕಿ ಸಮೇತ ಒದಗಿಸುವುದು)

(ಆ) ಫಲಾನುಭವಿಗಳ ಕುಟುಂಬ ವಾರ್ಷಿಕ ಚಿಕಿತ್ಸಾ ವೆಚ್ಚವನ್ನು ೫ ಲಕ್ಷದಿಂದ ೧೦ ಲಕ್ಷದ ವರೆಗೆ ಹೆಚ್ಚಿಸುವ ಬಗ್ಗೆ ಸರ್ಕಾರ ನಿರ್ಧರಿಸಿದೆಯೇ ? (ಇದ್ದಲ್ಲಿ ಮಾಹಿತಿ ನೀಡುವುದು)

## ಖಾತಾ ಬದಲಾವಣೆಗೆ ವಿಳಂಬವಾಗುತ್ತಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೬ (೫೫೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ದಕ್ಷಿಣ ತಾವರೆಕೆರೆ ಹೋಬಳಿ ವ್ಯಾಪ್ತಿಯ ಚಿಕ್ಕನಹಳ್ಳಿ ಪಂಚಾಯತ್‌ನಲ್ಲಿ ಕಳೆದ ೫ ವರ್ಷದಿಂದ ಎಷ್ಟು ಬಡಾವಣೆ ನಿರ್ಮಾಣಕ್ಕೆ ಅನುಮತಿ ನೀಡಲಾಗಿದೆ ; (ಮಾಹಿತಿ ನೀಡುವುದು)

(ಆ) ಇಲ್ಲಿ ಅನುಮತಿ ನೀಡಿರುವ ಬಡಾವಣೆಗಳಿಗೆ ಇಲ್ಲಿಯವರೆಗೆ ನಿವೇಶನ ಪಡೆದವರಿಗೆ ಖಾತಾ ಬದಲಾವಣೆ ಮಾಡದಿರಲು ಕಾರಣವೇನು ; (ವಿವರ ಒದಗಿಸುವುದು)

(ಇ) ಸರ್ಕಾರ ಖಾತಾ ಬದಲಾವಣೆಗೆ ಅವಕಾಶ ಕೊಟ್ಟರು ಇಲ್ಲಿಯವರೆಗೆ ಖಾತಾ ಬದಲಾವಣೆ ಪ್ರಕ್ರಿಯೆ ನಡೆಸದಿರಲು ಕಾರಣವೇನು ? (ವಿವರ ಒದಗಿಸುವುದು)

## ದಾವಣಗೆರೆ ಜಿಲ್ಲೆಯಲ್ಲಿ ವಿಲೇವಾರಿಯಾಗುವ ತ್ಯಾಜ್ಯದ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೯೭ (೫೪೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಾವಣಗೆರೆ ಜಿಲ್ಲೆಯ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳಲ್ಲಿ ಪ್ರತಿದಿನ ಉತ್ಪಾದನೆಯಾಗುತ್ತಿರುವ ತ್ಯಾಜ್ಯದ ಪ್ರಮಾಣವೆಷ್ಟು ;

(ಆ) ಸದರಿ ತ್ಯಾಜ್ಯವನ್ನು ಜಿಲ್ಲೆಯ ಪ್ರತಿಯೊಂದು ನಗರಸಭೆ/ಪುರಸಭೆ/ ಪಟ್ಟಣ ಪಂಚಾಯಿತಿಗಳ ಸಂಸ್ಥೆಯು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಯಾವ ರೀತಿಯ ಸೂಕ್ತ ಕ್ರಮಗಳನ್ನು ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ದಾವಣಗೆರೆ ಜಿಲ್ಲೆಯಲ್ಲಿ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳಲ್ಲಿ ತ್ಯಾಜ್ಯ ವಿಲೇವಾರಿ ಮಾಡಲು ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಸದರಿಯವರಿಗೆ ನೀಡುತ್ತಿರುವ ವೇತನವೆಷ್ಟು ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ವ್ಯವಸಾಯ ಸಹಕಾರ ಸಂಘಗಳಿಂದ ನೀಡುವ ಸಾಲ–ಸೌಲಭ್ಯಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೮ (೫೪೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆಯಲ್ಲಿರುವ ವ್ಯವಸಾಯ ಸಹಕಾರ ಸಂಘಗಳೆಷ್ಟು ; ಅವುಗಳಲ್ಲಿ ಸಾಲಕ್ಕಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸಹಕಾರ ಸಂಘಗಳಿಂದ ರೈತರಿಗೆ ಯಾವ ಯಾವ ರೀತಿಯ ಸಾಲ ಸೌಲಭ್ಯ ನೀಡಲಾಗುತ್ತಿದೆ ; (ವಿವರ ನೀಡುವುದು)

(ಇ) ದಾವಣಗೆರೆ ಜಿಲ್ಲೆಯಲ್ಲಿ ಸಹಕಾರ ಸಂಘಗಳಿಂದ ರೈತರಿಗೆ ನೀಡಿರುವ ಸಾಲದ ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಪ್ರಸ್ತುತ ಸಾಲಿನಲ್ಲಿ ನೀಡುತ್ತಿರುವ ಸಾಲದ ಮೊತ್ತವೆಷ್ಟು ; ಸದರಿ ಮೊತ್ತವನ್ನು ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ ? (ಪೂರ್ಣ ವಿವರ ಒದಗಿಸುವುದು)

## ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಪ್ರೋತ್ಸಾಹಕ ಯೋಜನೆಗಳ ಬಗ್ಗೆ

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :–**

೪೯೯ (೫೭೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ನೂತನವಾಗಿ ಪ್ರಾರಂಭಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಯಾವ ರೀತಿಯ ಪ್ರೋತ್ಸಾಹಕ ಯೋಜನೆಗಳಿವೆ ; (ವಿವರ ಒದಗಿಸುವುದು)

(ಆ) ಕಳೆದ ಎರಡು ವರ್ಷಗಳಿಂದ ಕಲ್ಯಾಣ ಕರ್ನಾಟಕದಲ್ಲಿ ಪ್ರಾರಂಭವಾಗಿರುವ ನೂತನ ಖಾಸಗಿ ಹಾಗೂ ಸರ್ಕಾರಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಸದರಿ ಕೈಗಾರಿಕೆಗಳಿಂದ ಎಷ್ಟು ಮೊತ್ತದ ಹಣ ಹೂಡಿಕೆಯಾಗಿದೆ ; (ವಿವರ ಒದಗಿಸುವುದು)

(ಈ) ನೂತನ ಕೈಗಾರಿಕೆಗಳ ಸ್ಥಾಪನೆಯಿಂದ ಸೃಷ್ಟಿಯಾದ ಪ್ರಮಾಣ ಎಷ್ಟು ? (ವಿವರ ಒದಗಿಸುವುದು)

## ರೈತರಿಗಾಗಿ ಇರುವ ವಿವಿಧ ಸಾಲದ ಯೋಜನೆಗಳ ಕುರಿತು

**ಡಾ|| ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೦೦ (೫೮೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಾಗಿ ಇರುವ ವಿವಿಧ ಸಾಲದ ಯೋಜನೆಗಳು ಯಾವುವು ; ಯಾವ ಯಾವ ಯೋಜನೆಗಳಿಗೆ ಯಾವ ಯಾವ ನಿಯಮಗಳಿವೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸಹಕಾರ ಇಲಾಖೆಯಿಂದ ಸಹಾಯಧನ ಹೊಂದಿರುವ ಯೋಜನೆಗಳು ಯಾವುವು ಹಾಗೂ ಈ ಸಾಲ ಯೋಜನೆಗಳ ಪೈಕಿ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳು ಏನೇನು ; (ವಿವರ ನೀಡುವುದು)

(ಇ) ರೈತರಿಗಾಗಿ ಸಹಕಾರ ಇಲಾಖೆಯಿಂದ ವಾಹನ ಸಾಲದ ಯೋಜನೆ ಪ್ರಸ್ತುತ ಜಾರಿಯಲ್ಲಿ ಇದೆಯೇ ;

(ಈ) ಇದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತದೆ ; ಹಾಗೂ ನೀಡಲಾಗುತ್ತಿರುವ ಸಬ್ಸಿಡಿ ಎಷ್ಟು ?

## ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೦೧ (೫೮೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ದೊಡ್ಡ ದೊಡ್ಡ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳನ್ನು ಜಿಲ್ಲಾಡಳಿತ ಸರ್ಕಾರಕ್ಕೆ ಸಲ್ಲಿಸಿದೆಯೇ ;

(ಆ) ಸಲ್ಲಿಸಿದ್ದಲ್ಲಿ, ಸದರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ನಿರ್ಧರಿಸಿದೆ ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಇ) ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಅನುಸರಿಸುವ ಮಾನದಂಡಗಳೇನು ? (ಸಂಬಂಧಿಸಿದ ಆದೇಶದ ಪ್ರತಿ ಒದಗಿಸುವುದು)

## ಸಿ.ಎಸ್.ಆರ್. ಅನುದಾನವನ್ನು ಬಳಕೆ ಮಾಡುವ ಕುರಿತು

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦೨ (೫೭೫) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿ.ಎಸ್.ಆರ್ (ಕಾರ್ಪೋರೇಟ್ ಸೋಷಿಯಲ್ ರೆಸ್ಪಾನ್ಸಿಬಿಲಿಟಿ) ಯೋಜನೆಯಡಿ ರಾಜ್ಯದಲ್ಲಿರುವ ಸರ್ಕಾರಿ ಕಾರ್ಪೋರೇಟ್ ಕಂಪನಿಗಳು, ನಿಗಮಗಳು, ಮಂಡಳಿಗಳು, ಅಭಿವೃದ್ಧಿ ಪ್ರಾಧಿಕಾರಗಳು ಹಾಗೂ ಖಾಸಗಿ ಕಾರ್ಪೋರೇಟ್ ಕಂಪನಿಗಳು ಶೇಕಡವಾರು ಎಷ್ಟು ಪ್ರಮಾಣದಲ್ಲಿ ಸಿ.ಎಸ್.ಆರ್ ನಿಧಿಯನ್ನು ಕೊಡಲು ಅವಕಾಶವಿದೆ ; (ಸಂಪೂರ್ಣ ಮಾಹಿತಿಯೊಂದಿಗೆ ಆದೇಶ/ಸುತ್ತೋಲೆಗಳನ್ನು ಒದಗಿಸುವುದರೊಂದಿಗೆ ವಿವರಣೆ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಸಿ.ಎಸ್.ಆರ್ (ಕಾರ್ಪೋರೇಟ್ ಸೋಷಿಯಲ್ ರೆಸ್ಪಾನ್ಸಿಬಿಲಿಟಿ) ಯೋಜನೆಯಡಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ತೆಗೆದುಕೊಂಡು ಅಭಿವೃದ್ಧಿ ಅಥವಾ ಪುನಃಶ್ಚೇತನಗೊಳಿಸಲಾಗಿದೆ ; (ಸಂಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು)

(ಇ) ಬೆಂಗಳೂರು ನಗರ ಜಿಲ್ಲೆ ಸೇರಿದಂತೆ, ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಸರ್ಕಾರಿ ಶಾಲಾ ಕಾಲೇಜುಗಳ ಕಟ್ಟಡ, ಅಂಗನವಾಡಿ ಕಟ್ಟಡಗಳು, ಬೆಂಗಳೂರು ನಗರದಲ್ಲಿರುವ ಕೆರೆಗಳ ದುರಸ್ತಿ ಮತ್ತು ಪುನಃಶ್ಚೇತನ ಕಾಮಗಾರಿಗಳನ್ನು ಕೈಗೊಳ್ಳಲು ಈ ಸಿ.ಎಸ್.ಆರ್ ನಿಧಿಯ ಅನುದಾನವನ್ನು ಇದುವರೆವಿಗೂ ಏಕೆ ಬಳಕೆ ಮಾಡಿಕೊಂಡಿಲ್ಲ ; (ವಿವರ ನೀಡುವುದು)

(ಈ) ಈ ಯೋಜನೆಯಡಿ ರಾಜ್ಯದಲ್ಲಿರುವ ಸರ್ಕಾರಿ ಕಾರ್ಪೋರೇಟ್ ಕಂಪನಿಗಳು, ನಿಗಮಗಳು ಮಂಡಳಿಗಳು, ಅಭಿವೃದ್ಧಿ ಪ್ರಾಧಿಕಾರಗಳು ಹಾಗೂ ಖಾಸಗಿ ಕಾರ್ಪೋರೇಟ್ ಕಂಪನಿಗಳು ಶೇಕಡವಾರು ಇಂತಹ ಕಾಮಗಾರಿಗಳಿಗೆ ಅನುದಾನವನ್ನು ನೀಡುವಂತೆ ಕಟ್ಟು ನಿಟ್ಟಿನ ಆದೇಶ ಹೊರಡಿಸಲಾಗುವುದೆ ? (ಸ್ಪಷ್ಟ ಉತ್ತರ ನೀಡುವುದು)

## ಸಹಕಾರಿ ಇಲಾಖೆಯ ಕೆ.ಎಂ.ಎಫ್. ಗಳ ಮಾಹಿತಿ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೫೦೩ (೫೩೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಕಾರ ಇಲಾಖೆಯಡಿಯಲ್ಲಿ ಬರುವ ಕೆ.ಎಂ.ಎಫ್ ಗಳ ಸಂಖ್ಯೆ ಎಷ್ಟು ;

(ಆ) ಹಾಲು ಒಕ್ಕೂಟಗಳಲ್ಲಿ ನೇಮಕಾತಿ ಪ್ರಕ್ರಿಯೆಗೆ ಇರುವಂತಹ ನಿಯಮಗಳಾವುವು ; (ವಿವರಗಳನ್ನು ಒದಗಿಸುವುದು)

(ಇ) ಕಳೆದ ೦೩ ವರ್ಷಗಳಲ್ಲಿ ಕರ್ನಾಟಕ ರಾಜ್ಯದಲ್ಲಿ ಎಷ್ಟು ನೇಮಕಾತಿಗಳನ್ನು ಮಾಡಲಾಗಿದೆ ; (ವೃಂದವಾರು ಮಾಹಿತಿ ನೀಡುವುದು)

(ಈ) ಕೆ.ಎಂ.ಎಫ್ ಗಳಲ್ಲಿ ಬಡ್ತಿಗೆ ನಿಗಧಿಪಡಿಸಿರುವ ನಿಯಮಗಳು ಮತ್ತು ಹಿರಿತನದ ಮೇಲೆ ಇದುವರೆವಿಗೂ ನೀಡಿರುವ ಬಡ್ತಿಗಳು ಎಷ್ಟು? (ವೃಂದವಾರು ಮಾಹಿತಿ ನೀಡುವುದು)

## ಮರಳು ಗಣಿಗಾರಿಕೆ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ.(ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೦೪ (೫೫೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಮರಳು ಗಣಿಗಾರಿಕೆಗಾಗಿ ಗುರುತು ಮಾಡಲಾಗಿರುವ ಮರಳು ಬ್ಲಾಕ್‌ಗಳೆಷ್ಟು ;

(ಆ) ಈ ರೀತಿ ಗುರುತಿಸಿದ ಎಷ್ಟು ಮರಳು ಬ್ಲಾಕ್‌ಗಳನ್ನು ಮರಳು ಗಣಿಗಾರಿಕೆಗಾಗಿ ಸಾರ್ವಜನಿಕ ಹರಾಜು ಮೂಲಕ ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಅಕ್ರಮ ಮರಳು ಗಣಿಗಾರಿಕೆ ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ಮತ್ತು ದಾಖಲಾದ ಪ್ರಕರಣಗಳೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಗಣಿ ಮತ್ತು ಕಲ್ಲು ಗಣಿಗಾರಿಕೆಯ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ.(ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೦೫ (೫೫೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ವಿವಿಧ ಖನಿಜ ಮತ್ತು ಉಪ ಖನಿಜಗಳ ಗಣಿಗಾರಿಕೆಗಾಗಿ ಎಷ್ಟು ಗಣಿ, ಕಲ್ಲು ಗಣಿ ಗುತ್ತಿಗೆಗಳನ್ನು ಎಷ್ಟು ವಿಸ್ತೀರ್ಣದ ಪ್ರದೇಶದಲ್ಲಿ ಮಂಜೂರು ಮಾಡಲಾಗಿದೆ ; ಯಾವ ವಿಧಾನ ಹಾಗೂ ಮಾನದಂಡಗಳ ಮೂಲಕ ಈ ಪರವಾನಿಗೆಯನ್ನು ಮಂಜೂರು ಮಾಡಲಾಗಿದೆ ;

(ಆ) ರಾಜ್ಯದಲ್ಲಿ ಅನಧಿಕೃತ ಗಣಿ ಚಟುವಟಿಕೆಗಳು ಅವ್ಯಾಹತವಾಗಿ ನಡೆಯುತ್ತಿದ್ದು, ಈ ಅನಧಿಕೃತ ಗಣಿಗಾರಿಕೆಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಮಂಜೂರಾದ ಗಣಿ ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಗಣಿಗಾರಿಕೆ ನಡೆಸುವುದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಈ) ಕೊಡಗು ಜಿಲ್ಲೆಯಲ್ಲಿ ಚಾಲ್ತಿಯಲ್ಲಿರುವ ಅಧಿಕೃತ ಮತ್ತು ಅನಧಿಕೃತ ಗಣಿ ಮತ್ತು ಕಲ್ಲುಗಣಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಸಣ್ಣ ಕೈಗಾರಿಕೆಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಸಿಗುವ ಸಾಲ ಸೌಲಭ್ಯಗಳು

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೦೬ (೫೬೬) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಣ್ಣ ಕೈಗಾರಿಕೆಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಸಿಗುತ್ತಿರುವ ಸಾಲ ಸೌಲಭ್ಯಗಳು ಯಾವುವು ;

(ಆ) ಕಳೆದ ಮೂರು ವರ್ಷಗಳಿಂದ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಯಾವ ಯಾವ ಕೈಗಾರಿಕೋದ್ಯಮಗಳಿಗೆ ತಲುಪಿರುವ ವಿವಿಧ ಸೌಲಭ್ಯಗಳಾವುವು ;

(ಇ) ಸದರಿ ಜಿಲ್ಲೆಗಳಲ್ಲಿ ಈ ಸಾಲ ಸೌಲಭ್ಯ ಪಡೆದಿರುವ ಕೈಗಾರಿಕೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ? (ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಮಹಾನಗರ ಪಾಲಿಕೆ ಘನ ತ್ಯಾಜ್ಯ ನಿರ್ವಹಣೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೦೭ (೫೬೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಘನ ತ್ಯಾಜ್ಯ ನಿರ್ವಹಣೆ ಮಾಡಲು ಸರ್ಕಾರ ಕೈಗೊಂಡಿರುವ ಯೋಜನೆಗಳು ಯಾವುವು ;

(ಆ) ಘನ ತ್ಯಾಜ್ಯ ನಿರ್ವಹಣೆಗಾಗಿ ಯಾವ ಯಾವ ಸಂಸ್ಥೆಗಳನ್ನು ಯಾವ ಮಾನದಂಡದ ಆಧಾರದಲ್ಲಿ ಆಯ್ಕೆ ಮಾಡಿ ಅನುದಾನ ಹಂಚಿಕೆ ಮಾಡಲಾಗುತ್ತಿದೆ ;

(ಇ) ಸದರಿ ಸಂಸ್ಥೆಗಳಿಗೆ ಹಂಚಿಕೆಯಾಗಿರುವ ಅನುದಾನದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಶೇಕಡವಾರು ಪ್ರಮಾಣ ಎಷ್ಟು ;

(ಈ) ಕಳೆದ ಮೂರು ವರ್ಷಗಳಲ್ಲಿ ಘನ ತ್ಯಾಜ್ಯ ನಿರ್ವಹಣೆಗಾಗಿ ಖರ್ಚಾಗಿರುವ ಹಣದ ಪ್ರಮಾಣವೆಷ್ಟು ?

## ಕಲಬುರಗಿಯಲ್ಲಿ ಸ್ಥಾಪನೆಯಗಲಿರುವ ಜವಳಿ ಪಾರ್ಕ್ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೦೮ (೫೬೮) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿ ಸ್ಥಾಪನೆಯಾಗಲಿರುವ ಜವಳಿ ಪಾರ್ಕ್‌ಗೆ ತಗಲಿದ ವೆಚ್ಚವೆಷ್ಟು ಹಾಗೂ ಕೇಂದ್ರ, ರಾಜ್ಯ ಸರ್ಕಾರಗಳಿಂದ ಈ ಜವಳಿ ಪಾರ್ಕ್ ಸ್ಥಾಪನೆಗೆ ವಿವಿಧ ರೂಪದಲ್ಲಿ ದೊರೆತಿರುವ ನೆರವು ಎಷ್ಟು ; ಪ್ರಸ್ತುತ ಜವಳಿ ಪಾರ್ಕ್‌ನ ಸ್ಥಿತಿಗತಿಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಜವಳಿ ಪಾರ್ಕ್ ಸ್ಥಾಪನೆಯಿಂದ ಸೃಜನೆಗೊಂಡಿರುವ ಉದ್ಯೋಗಗಳೆಷ್ಟು ; ಕೈಮಗ್ಗ ಮತ್ತು ಜವಳಿ ಕ್ಷೇತ್ರಗಳಲ್ಲಿ ಅತ್ಯಧಿಕ ಸಂಖ್ಯೆಯಲ್ಲಿ ನೇಕಾರರಿದ್ದು, ಈ ಜನರಿಗೆ ವಿಶೇಷ ತರಬೇತಿ ನೀಡಿ ಸ್ವಯಂ ಉದ್ಯೋಗ ಕೈಗೊಳ್ಳಲು ಅಥವಾ ಉದ್ಯೋಗ ದೊರಕಿಸಿ ಕೊಡಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಆಯೋಜಿಸಿರುವ ಯೋಜನೆಗಳು ಯಾವುವು ;

(ಇ) ಈ ಯೋಜನೆಗಳ ಅಡಿಯಲ್ಲಿ ಇದುವರೆವಿಗೂ ಒದಗಿಸಿರುವ ವಿವಿಧ ತರಬೇತಿಗಳು ಯಾವುವು ?

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ಜನರಿಗಾಗಿ ಸಣ್ಣ ಕೈಗಾರಿಕೆ ಸ್ಥಾಪಿಸಲು ಇರುವ ಯೋಜನೆಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೫೮೯ (೫೪೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗದವರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದ ವತಿಯಿಂದ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ;

(ಆ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗದವರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸಾಲ ಸೌಲಭ್ಯ ಮತ್ತು ಸಹಾಯಧನವನ್ನು ನೀಡಲಾಗುತ್ತಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಹಾಲು ಉತ್ಪಾದಕರ ಸಹಕಾರ ಸಂಘಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೫೯೦ (೫೪೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ, ಧಾರವಾಡ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಇರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಮತ್ತು ಹಾಲು ಉತ್ಪಾದಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹಾಲು ಉತ್ಪಾದಕರಿಗೆ ಪ್ರತಿ ಲೀಟರ್ ಹಾಲಿಗೆ ನೀಡುತ್ತಿರುವ ದರ ಹಾಗೂ ಪ್ರೋತ್ಸಾಹ ಧನದ ದರ ಎಷ್ಟು ಹಾಗೂ ಪ್ರೋತ್ಸಾಹ ಧನವೆಷ್ಟು ; (ಮಾಹಿತಿ ನೀಡುವುದು)

(ಇ) ಹಾಲು ಉತ್ಪಾದಕರ ಸಹಕಾರ ಸಂಘಗಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ?

# ಉತ್ತರ ಕನ್ನಡ ಜಿಲ್ಲೆಯಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೫೧೧ (೫೪೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಲೆನಾಡು ಜಿಲ್ಲೆಗಳಿಗೆ ಕೈಗಾರಿಕೆಗಳನ್ನು ತರುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಕಳೆದ ೨ ವರ್ಷಗಳಲ್ಲಿ ಎಷ್ಟು ಕೈಗಾರಿಕೆಗಳನ್ನು ಮಲೆನಾಡಿನಲ್ಲಿ ಸ್ಥಾಪಿಸಲಾಗಿದೆ ಮತ್ತು ಎಷ್ಟು ಉದ್ಯೋಗಗಳನ್ನು ಸೃಷ್ಟಿಸಲಾಗಿದೆ ; (ಮಾಹಿತಿ ನೀಡುವುದು)

(ಆ) ಉತ್ತರ ಕನ್ನಡ ಜಿಲ್ಲೆಯುಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಇ) ಇದ್ದಲ್ಲಿ, ಸ್ಥಾಪಿಸಲು ಉದ್ದೇಶಿಸಿರುವ ಕೈಗಾರಿಕೆಗಳು ಯಾವುವು ? (ಮಾಹಿತಿ ನೀಡುವುದು)

# ರಾಜ್ಯದಲ್ಲಿ ಗಣಿಗಾರಿಕೆಯ ಬಗ್ಗೆ ಮಾಹಿತಿ ನೀಡುವುದು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೫೧೨ (೫೨೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಡೆಯುತ್ತಿರುವ ಗಣಿ ಕೈಗಾರಿಕೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸರ್ಕಾರದ ಆದೇಶ ಮತ್ತು ನಿಯಮದ ಪ್ರಕಾರ ಒಂದು ಕೋಟಿ ವರೆಗೂ ಗುತ್ತಿಗೆಯನ್ನು ಪ್ರವರ್ಗ-೧ರ ಜಾತಿಯ ಜನಾಂಗದವರಿಗೆ ನೀಡಬೇಕಾಗಿದ್ದು ಇದುವರೆಗೂ ಎಷ್ಟು ಪ್ರವರ್ಗ-೧ರ ಜಾತಿಗಳಿಗೆ ಗುತ್ತಿಗೆಯನ್ನು ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗಣಿ ಕೈಗಾರಿಕೆಗಳನ್ನು ಸ್ಥಾಪಿಸಲು ಇರುವ ನಿಯಮಗಳು ಯಾವುವು ?

## ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳು ಹಾಗೂ ಕೆಲಸ ನಿರ್ವಹಿಸುತ್ತಿರುವ ನೌಕರರ ಬಗ್ಗೆ ಮಾಹಿತಿ ನೀಡುವುದು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೫೧೩ (೫೩೦) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸಕ್ಕರೆ ಕಾರ್ಖಾನೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; ನೌಕರರು ಖಾಯಂ ನೌಕರರೇ ಅಥವಾ ತಾತ್ಕಾಲಿಕ ನೌಕರರೇ ; ಈ ನೌಕರರಿಗೆ ಕಾರ್ಮಿಕ ಇಲಾಖೆಯು ನಿಯಮಾನುಸಾರ ವೇತನ ಪಾವತಿಸಲಾಗುತ್ತಿದೆಯೇ ;

(ಇ) ಸಕ್ಕರೆ ಕಾರ್ಖಾನೆಗಳಲ್ಲಿ ಕೆಲಸ ನಿರ್ವಹಣೆ ಮಾಡುತ್ತಿರುವ ನೌಕರರಿಗೆ ಸಿಗುತ್ತಿರುವ ಸೌಲಭ್ಯಗಳು ಯಾವುವು ;

(ಈ) ಸಕ್ಕರೆ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಸಮರ್ಪಕವಾಗಿ ಪಾವತಿ ಮಾಡದೇ ಇರುವ ಸಕ್ಕರೆ ಕಾರ್ಖಾನೆಗಳ ಮೇಲೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ?

## ಕೈಗಾರಿಕಾ ಕಾರಿಡಾರ್‌ಗಳ ಸ್ಥಾಪಿಸುವ ಬಗ್ಗೆ ಮಾಹಿತಿ ನೀಡುವುದು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೫೧೪ (೫೩೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಕೈಗಾರಿಕಾ ವಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೈಗಾರಿಕಾ ಕಾರಿಡಾರ್‌ಗಳನ್ನು ಸ್ಥಾಪಿಸಲು ಕರ್ನಾಟಕ ರಾಜ್ಯದಲ್ಲಿ ರೈತರಿಂದ ಎಷ್ಟು ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ ;

(ಇ) ರೈತರಿಂದ ಸ್ವಾಧೀನ ಪಡಿಸಿಕೊಳ್ಳಲಾದ ಎಲ್ಲಾ ಜಮೀನಿಗೆ ನಿಯಮಾನುಸಾರ ಪರಿಹಾರವನ್ನು ವಿತರಿಸಲಾಗಿದೆಯೇ ; ಇಲ್ಲದೇ ಇದ್ದಲ್ಲಿ, ಇನ್ನು ಎಷ್ಟು ರೈತರಿಗೆ ಪರಿಹಾರವನ್ನು ವಿತರಿಸಬೇಕಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಇನ್ನೂ ಹೆಚ್ಚಿನ ಕೈಗಾರಿಕಾ ಕಾರಿಡಾರ್‌ಗಳನ್ನು ಸ್ಥಾಪಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ; ಈ ರೀತಿಯಾಗಿ ಕೈಗಾರಿಕಾ ಕಾರಿಡಾರ್‌ಗಳನ್ನು ಸ್ಥಾಪಿಸಲು ಉದ್ದೇಶಿಸಿರುವ ಸ್ಥಳಗಳು ಯಾವುವು ;

(ಉ) ಕೈಗಾರಿಕಾ ಕಾರಿಡಾರ್‌ಗಳ ನಿರ್ಮಾಣದ ಸಂಬಂಧವಾಗಿ ನೀಡುವ ಗುತ್ತಿಗೆಗಳಲ್ಲಿ ಸರ್ಕಾರದ ನಿಯಮಾನುಸಾರ ಪ್ರವರ್ಗ–೧ರ ಹಿಂದುಳಿದ ಜಾತಿಗಳಿಗೆ ಒಂದು ಕೋಟಿವರೆಗೆ ಗುತ್ತಿಗೆಯನ್ನು ನೀಡಲು ಕೈಗೊಂಡಿರುವ ಕ್ರಮಗಳೇನು ;

(ಊ) ಇದುವರೆಗೂ ಪ್ರವರ್ಗ–೧ರ ಜಾತಿಗಳ ಗುತ್ತಿಗೆದಾರರಿಗೆ ಎಷ್ಟು ಗುತ್ತಿಗೆಯನ್ನು ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O236/500 ಪ್ರತಿಗಳು/04–03–2025